ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 290 RNI Number : KNKAN/25/A2770 03-11-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:290 ರಾಯಚೂರು 03-11-2026 ಮಂಗಳವಾರ ಪುಟ 04 ಬೆಲೆ ರೂ.2/- Postal Reg Number:RCR/L/RNP/117/2026-28

ಚಂಡಮಾರುತ ಪೀಡಿತ ಆಂಧ್ರ ಪ್ರದೇಶಕ್ಕೆ ಕರ್ನಾಟಕದಿಂದ ನೆರವಿನ ಹಸ್ತ- ಸಿಎಂ

ಬೆಂಗಳೂರು: 'ಅರ್ನಾಬ್' ಚಂಡಮಾರುತದಿಂದಾಗಿ ಹಾನಿಗೊಳಗಾದ ಆಂಧ್ರ ಪ್ರದೇಶದಲ್ಲಿ ವಿದ್ಯುತ್ ಪೂರೈಕೆ ಮೂಲಸೌಕರ್ಯ ಮರುಸ್ಥಾಪನೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರ ಸಹಾಯ ಹಸ್ತ ಚಾಚಿದೆ.

ವಿದ್ಯುತ್ ಪೂರೈಕೆ ಮೂಲಸೌಕರ್ಯ ಮರುಸ್ಥಾಪಿಸಲು ಅಗತ್ಯವಿರುವ ಮಾನವಶಕ್ತಿ ಮತ್ತು ಉಪಕರಣಗಳನ್ನು ಒದಗಿಸುವಂತೆ ಆಂಧ್ರಪ್ರದೇಶ ಸರ್ಕಾರವು ಕರ್ನಾಟಕ ಸರ್ಕಾರಕ್ಕೆ ವಿನಂತಿಸಿತ್ತು. ಇದಕ್ಕೆ ಸ್ಪಂದಿಸಿರುವ ರಾಜ್ಯ ಸರ್ಕಾರ, ಇಂಧನ ಸಚಿವ ಕೆ.ಜೆ.ಜಾರ್ಜ್ ಅವರ ಮೇಲ್ವಿಚಾರಣೆಯಲ್ಲಿ ರಾಜ್ಯಗಳ ನಡುವಿನ ಸಹಕಾರ ಮತ್ತು ಒಗ್ಗಟ್ಟಿನ ದೃಷ್ಟಿಯಿಂದ ಆಂಧ್ರ ಪ್ರದೇಶಕ್ಕೆ ಸಹಾಯ ಮಾಡಲು ಮುಂದಾಗಿದೆ.

ಆಂಧ್ರ ಪ್ರದೇಶ ಸಿಎಂ ಚಂದ್ರಬಾಬು ನಾಯ್ಡು ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದ ಸಿಎಂ ಡಿ.ಕೆ.ಶಿವಕುಮಾರ್, ಸಂಕಷ್ಟದ ಈ ಸಮಯದಲ್ಲಿ ಕರ್ನಾಟಕವು ಸಂಪೂರ್ಣ ಬೆಂಬಲ ನೀಡಲಿದೆ ಎಂಬ ಭರವಸೆ ನೀಡಿದ್ದಾರೆ.

ಆಂಧ್ರಪ್ರದೇಶದ ಜನರೊಂದಿಗೆ ಕರ್ನಾಟಕ ದೃಢವಾಗಿ ನಿಲ್ಲುತ್ತದೆ: ವಿದ್ಯುತ್ ಅತ್ಯಗತ್ಯ ಸೇವೆಯಾಗಿದ್ದು, ವಿಕೋಪಕ್ಕೆ ಸಿಲುಕಿದ ಜನರ ಕ್ಷೇಮಕ್ಕಾಗಿ ಅದನ್ನು ತಕ್ಷಣ ಮರುಸ್ಥಾಪಿಸುವುದು ತುರ್ತು ಅಗತ್ಯವಾಗಿದೆ. ಕಷ್ಟದ ಸಮಯದಲ್ಲಿ ಕರ್ನಾಟಕವು ಆಂಧ್ರಪ್ರದೇಶದ ಜನರೊಂದಿಗೆ ದೃಢವಾಗಿ ನಿಲ್ಲುತ್ತದೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಕ್ಷೇತ್ರ ಮಟ್ಟದ ಸಮರ್ಥ ಸಮನ್ವಯ ಮತ್ತು ಅತ್ಯಾಧುನಿಕ ಉಪಕರಣಗಳ ಬಳಕೆಯ ಮೂಲಕ ಆಂಧ್ರಪ್ರದೇಶದ ಅಧಿಕಾರಿಗಳೊಂದಿಗೆ ನಿಕಟವಾಗಿ ಕೆಲಸ



ಮಾಡಿ ವಿದ್ಯುತ್ ಪೂರೈಕೆಯನ್ನು ಶೀಘ್ರವೇ ಪುನರಾರಂಭಿಸುತ್ತೇವೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

500 ಕೌಶಲ್ಯಯುತ ಲೈನ್‌ಮನ್‌ಗಳು, ಕ್ರೇನ್, ಅರ್ಥ್ ಆಗರ್ ಹೊಂದಿರುವ 15 ಪಾಲ್ಫಿಂಗರ್ ಲಾರಿ, 25 ಟ್ರ್ಯಾಕ್ಟರ್ ಆಧಾರಿತ ಡ್ರಿಲ್ಲಿಂಗ್ ಯಂತ್ರಗಳ ರವಾನೆ ಮಾಡಲಾಗಿದೆ. ಚಂಡಮಾರುತ ಪೀಡಿತ ಪ್ರದೇಶಗಳಲ್ಲಿ ವಿದ್ಯುತ್ ವಿತರಣಾ ಮೂಲಸೌಕರ್ಯ ಮರುಸ್ಥಾಪನೆ ಕಾಮಗಾರಿಗಳನ್ನು ಕೈಗೊಳ್ಳಲು ಹಾಗೂ ಶೀಘ್ರವಾಗಿ ವಿದ್ಯುತ್ ಪೂರೈಕೆಗೆ 500 ಕೌಶಲ್ಯಯುತ ಲೈನ್‌ಮನ್‌ಗಳು, ಕ್ರೇನ್ ಮತ್ತು ಅರ್ಥ್ ಆಗರ್‌ಗಳನ್ನು ( ) ಹೊಂದಿರುವ 15 ಪಾಲ್ಫಿಂಗರ್ ಲಾರಿಗಳು ಹಾಗೂ 25 ಟ್ರ್ಯಾಕ್ಟರ್ ಆಧಾರಿತ ಡ್ರಿಲ್ಲಿಂಗ್ ಯಂತ್ರಗಳನ್ನು ರವಾನಿಸುತ್ತಿದೆ.

ಈ ತಂಡಗಳನ್ನು ತುರ್ತು ಸ್ಥಿತಿ ಆಧಾರದ ಮೇಲೆ ಸಜ್ಜುಗೊಳಿಸಲಾಗಿದ್ದು, ಸೋಮವಾರ ಮಧ್ಯಾಹ್ನವೇ ಆಂಧ್ರಪ್ರದೇಶಕ್ಕೆ ಪಯಣ ಬೆಳೆಸಿದ್ದು, ಮಧ್ಯರಾತ್ರಿ ಅಲ್ಲಿಗೆ ತಲುಪಲಿವೆ. ಪರಿಣಾಮಕಾರಿ ನಿಯೋಜನೆ ಮತ್ತು ಸಮನ್ವಯಕ್ಕಾಗಿ, ಪ್ರತಿ ಎಸ್ಕಾಂ ಆಂಧ್ರಪ್ರದೇಶದ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಲು ಒಬ್ಬ ಸಂಪರ್ಕ ಅಧಿಕಾರಿಯನ್ನು ನೇಮಿಸಲಾಗಿದೆ.

ಲೈನ್‌ಮನ್‌ಗಳನ್ನು ತಲಾ 10 ಸದಸ್ಯರ ತಂಡಗಳಾಗಿ ವಿಂಗಡಿಸಲಾಗಿದ್ದು, ಪ್ರತಿಯೊಂದು ತಂಡಕ್ಕೂ ಒಬ್ಬ ಕಿರಿಯ ಎಂಜಿನಿಯರ್/ಸಹಾಯಕ ಎಂಜಿನಿಯರ್ ನೇತೃತ್ವ ವಹಿಸುತ್ತಾರೆ. ನಿಯೋಜಿತ ತಂಡಗಳ ಒಟ್ಟಾರೆ ಮೇಲ್ವಿಚಾರಣೆ ಮತ್ತು ಸಮನ್ವಯಕ್ಕಾಗಿ ಪ್ರತಿ ಕಾರ್ಯಾಚರಣೆ ಮತ್ತು ನಿರ್ವಹಣೆ( ) ವೃತ್ತದಿಂದ ಒಬ್ಬ ಕಾರ್ಯನಿರ್ವಾಹಕ ಎಂಜಿನಿಯರ್ ಅವರನ್ನು ನಿಯೋಜಿಸಲಾಗಿದೆ.

ಕಾಮಗಾರಿ ಸ್ಥಳಗಳಲ್ಲಿ ಉಪಕರಣಗಳ ಪರಿಣಾಮಕಾರಿ ಬಳಕೆಯನ್ನು ಖಚಿತಪಡಿಸಿಕೊಳ್ಳಲು, ಕ್ರೇನ್ ಮತ್ತು ಅರ್ಥ್ ಆಗರ್‌ಗಳನ್ನು ಹೊಂದಿರುವ ಪಾಲ್ಫಿಂಗರ್ ಲಾರಿಗಳು ಹಾಗೂ ಟ್ರ್ಯಾಕ್ಟರ್ ಆಧಾರಿತ ಡ್ರಿಲ್ಲಿಂಗ್ ಯಂತ್ರಗಳ ಜೊತೆಗೆ ಅವುಗಳ ಚಾಲಕರು/ಆಪರೇಟರ್‌ಗಳು ಸಹ ತೆರಳಲಿದ್ದಾರೆ. ನಿಯೋಜಿತ ಸಿಬ್ಬಂದಿಯ ಪ್ರಯಾಣ, ವಸತಿ ಮತ್ತು ಇತರ ಅಗತ್ಯ ವ್ಯವಸ್ಥೆಗಳ ಅನಿರೀಕ್ಷಿತ ವೆಚ್ಚಗಳನ್ನು ಭರಿಸಲು ಅಗತ್ಯ ತುರ್ತು ನಿಧಿ ನೆರವನ್ನು ಸಹ ಒದಗಿಸಲಾಗುತ್ತದೆ.

ಈ ಸಮಯೋಚಿತ ನೆರವು ನೈಸರ್ಗಿಕ ವಿಕೋಪಗಳ ಸಂದರ್ಭದಲ್ಲಿ ನೆರೆಹೊರೆಯವರಿಗೆ ಮೊದಲ ಆದ್ಯತೆ ( ) ತತ್ವದಡಿ ಆಂಧ್ರಪ್ರದೇಶಕ್ಕೆ ಬೆಂಬಲ ನೀಡುವ ಮತ್ತು ಸಂಕಷ್ಟದಲ್ಲಿರುವ ಜನರಿಗೆ ಅಗತ್ಯ ವಿದ್ಯುತ್ ಸೇವೆಯನ್ನು ತ್ವರಿತವಾಗಿ ಮರುಸ್ಥಾಪಿಸುವಲ್ಲಿ ಕರ್ನಾಟಕದ ಬದ್ಧತೆಗೆ ಸಾಕ್ಷಿಯಾಗಿದೆ.

ವಂದೇ ಭಾರತ್ ಸ್ಲೀಪರ್ ರೈಲು ಸೇವೆಯಿಂದ ಕಲ್ಯಾಣ ಕರ್ನಾಟಕಕ್ಕೆ ಹೊಸ ವೇಗ; ಬಹುದಿನಗಳ ಬೇಡಿಕೆ ಈಡೇರಿಕೆ - ಬಾಬುರಾವ್





ರಾಯಚೂರು

ಕಲ್ಯಾಣ ಕರ್ನಾಟಕ ಭಾಗದ ರಾಯಚೂರು, ಯಾದಗಿರಿ ಹಾಗೂ ಕಲಬುರಗಿ ಜಿಲ್ಲೆಗಳಿಗೆ ವಂದೇ ಭಾರತ್ ಸ್ಲೀಪರ್ ಎಕ್ಸ್ ಪ್ರೆಸ್ ರೈಲು ಸೇವೆ ದೊರೆತಿರುವುದು ಈ ಭಾಗದ ಜನರಿಗೆ ಸಂತಸದ ಸಂಗತಿಯಾಗಿದೆ. ಬಹುದಿನಗಳಿಂದ ಈ ಭಾಗದ ಜನರು ನಡೆಸುತ್ತಿದ್ದ ಹೋರಾಟ ಹಾಗೂ ಬೇಡಿಕೆಗೆ ಕೊನೆಗೂ ಜಯ ಸಿಕ್ಕಿದೆ ಎಂದು ಬಾಬುರಾವ್ ಹೇಳಿದರು.

ವಂದೇ ಭಾರತ್ ಸ್ಲೀಪರ್ ಎಕ್ಸ್ ಪ್ರೆಸ್ ರೈಲಿನ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು ವಂದೇ ಭಾರತ್ ಸ್ಲೀಪರ್ ಎಕ್ಸ್ ಪ್ರೆಸ ರೈಲು ಗಂಟೆಗೆ 180 ಕಿಲೋಮೀಟರ್ ವೇಗದಲ್ಲಿ ಸಂಚರಿಸುವ ಸಾಮರ್ಥ್ಯ ಹೊಂದಿದ್ದು, ಉನ್ನತ ದರ್ಜೆಯ ಹಾಗೂ ಹೈ ಪ್ರೀಮಿಯಂ ಸೌಲಭ್ಯಗಳನ್ನು ಒಳಗೊಂಡಿದೆ.ಉದ್ಯಾನ ಎಕ್ಸ್ ಪ್ರೆಸ್ ರೈಲು ಸುಮಾರು 24 ಗಂಟೆಗಳ ಪ್ರಯಾಣದ ಅವಧಿ ತೆಗೆದುಕೊಂಡರೆ, ವಂದೇ ಭಾರತ್ ಸ್ಲೀಪರ್ ರೈಲು ಸುಮಾರು 16 ಗಂಟೆಗಳಲ್ಲಿ ಪ್ರಯಾಣ ಪೂರ್ಣಗೊಳಿಸಲಿದೆ . ಇದರಿಂದ ಪ್ರಯಾಣಿಕರಿಗೆ ಸಮಯ ಉಳಿತಾಯವಾಗುವುದರ ಜೊತೆಗೆ ಆರಾಮದಾಯಕ ಪ್ರಯಾಣದ ಅನುಕೂಲವೂ ದೊರೆಯಲಿದೆ ಎಂದು ಹೇಳಿದರು. ಇದೆ ವೇಳೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ರೈಲ್ವೆ ಸಚಿವ ವಿ. ಸೋಮಣ್ಣ ಅವರಿಗೆ ಕಲ್ಯಾಣ ಕರ್ನಾಟಕದ ಜನರ ಪರವಾಗಿ ಧನ್ಯವಾದಗಳನ್ನು ಸಲ್ಲಿಸಿದರು.

ಮೂರನೇಯ ಪುಟಕ್ಕೆ

ರಾಯಚೂರಿನಲ್ಲಿ ಡಾ. ಪುನೀತ್ ರಾಜ್‌ಕುಮಾರ ಕಲಾವಿದರ ಸಂಘಕ್ಕೆ ಅದ್ದೂರಿ ಚಾಲನೆ

ಕಲಾವಿದರ ಪ್ರತಿಭೆಗೆ ಹೊಸ ವೇದಿಕೆ - ವೀರೇಂದ್ರ ಜಲ್ದಾರ್ ಅವರ ಮಹತ್ವದ ಹೆಜ್ಜೆ


ರಾಯಚೂರು: ಕಲೆಗೆ ಗಡಿಯಿಲ್ಲ, ಪ್ರತಿಭೆಗೆ ಮಿತಿಯಿಲ್ಲ, ಸಾಧನೆಗೆ ವಯಸ್ಸಿನ ಹಂಗಿಲ್ಲ ಎಂಬ ಉದಾತ್ತ ಆಶಯದೊಂದಿಗೆ ಕನ್ನಡ



ರಾಜ್ಯೋತ್ಸವದ ಶುಭ ಸಂದರ್ಭದಲ್ಲಿ ರಾಯಚೂರಿನಲ್ಲಿ ಡಾ. ಪುನೀತ್ ರಾಜ್‌ಕುಮಾರ್ ಕಲಾವಿದರ ಸಂಘಕ್ಕೆ ಚಾಲನೆ ನೀಡಲಾಯಿತು.

ವೀರೇಂದ್ರ ಜಲ್ದಾರ್ ಅವರ ಸಂಸ್ಥಾಪಕತ್ವದಲ್ಲಿ ಆರಂಭಗೊಂಡ ಈ ಸಂಘವನ್ನು ರಾಯಚೂರಿನ ಜಹೀರಾಬಾದ್‌ನಲ್ಲಿರುವ ಅವರ ವಿಜೆ ಇಂಟರ್‌ನ್ಯಾಷನಲ್ಸ್ ಸ್ಟುಡಿಯೋದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಉದ್ಘಾಟಿಸಲಾಯಿತು.

ರಾಯಚೂರು ನಗರ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿ ಅಡಗಿರುವ ಪ್ರತಿಭಾವಂತ ಕಲಾವಿದರನ್ನು ಗುರುತಿಸಿ, ಅವರ ಕಲೆಗೆ ಸೂಕ್ತ ವೇದಿಕೆ ಕಲ್ಪಿಸುವುದು ಈ ಸಂಘದ ಮುಖ್ಯ ಉದ್ದೇಶವಾಗಿದೆ. ನೃತ್ಯ, ಗಾಯನ, ಸಂಗೀತ ವಾದ್ಯ, ನಾಟಕ ಹಾಗೂ ನಿರೂಪಣೆ ಸೇರಿದಂತೆ ವಿವಿಧ ಕಲಾ ಪ್ರಕಾರಗಳಲ್ಲಿ ಆಸಕ್ತಿ ಹೊಂದಿರುವ ಕಲಾವಿದರಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಉತ್ತಮ ಅವಕಾಶ ಕಲ್ಪಿಸುವ ಮಹತ್ವದ ಪ್ರಯತ್ನ ಇದಾಗಿದೆ.



ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ವಿಶೇಷ ಪ್ರತಿಭಾನ್ವಿತ ಗಾಯಕರಾದ ಭೀಮಸೇನ್, ಶ್ರುತಿ, ಬೋಳಬಂಡಿ ಹಾಗೂ ಮಂಜುಳಾ ಅವರು ದೀಪ ಬೆಳಗಿಸುವ ಮೂಲಕ ಸಂಘಕ್ಕೆ ಚಾಲನೆ ನೀಡಿದರು. ಕಲಾವಿದರ ಪ್ರತಿಭೆಗೆ ಗೌರವ ನೀಡುವ ಹಾಗೂ ಎಲ್ಲರಿಗೂ ಸಮಾನ ಅವಕಾಶ ಕಲ್ಪಿಸುವ ಸಂಘದ ಆಶಯಕ್ಕೆ ಈ ಕ್ಷಣ ಸಾಕ್ಷಿಯಾಯಿತು.

ಈ ಸಂದರ್ಭದಲ್ಲಿ ಸಂಗೀತ ಶಿಕ್ಷಕರಾದ ಮಲ್ಲೇಶಪ್ಪ, ಶಿಕ್ಷಕರಾದ ಡಾ. ದಂಡಪ್ಪ ಬಿರಾದಾರ್, ನಿವೃತ್ತ ಶಿಕ್ಷಕರಾದ ಚಂದ್ರಪ್ರಕಾಶ್, ಉಪನ್ಯಾಸಕರಾದ ರಾಜಶೇಖರ್, ಹಿರಿಯ ಕಲಾವಿದರಾದ ರಂಗನಾಥ್ ಹಾಗೂ ದೀಪಾ ಕಂಪ್ಯೂಟರ್ ಕೋಚಿಂಗ್ ಸೆಂಟರ್‌ನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೂರನೇಯ ಪುಟಕ್ಕೆ

ಗಾರಲದಿನ್ನಿದಲ್ಲಿ ವಿಜೃಂಭಣೆಯಿಂದ ಜರುಗಿದ ಕರ್ನಾಟಕ ರಾಜ್ಯೋತ್ಸವ: ವಿದ್ಯಾರ್ಥಿಗಳಿಗೆ ನೋಟ್‌ಬುಕ್ - ಪೆನ್ ವಿತರಣೆ



ರಾಯಚೂರು,ನ.1

ದಿನಾಂಕ 01-11-2026 ರಂದು ಕನ್ನಡ ನಾಡ ಹಬ್ಬವಾದ ಕರ್ನಾಟಕ ರಾಜ್ಯೋತ್ಸವವನ್ನು ರಾಯಚೂರು ತಾಲೂಕಿನ ಗಾರಲದಿನ್ನಿ ಗ್ರಾಮದ ಆಂಜನೇಯ ದೇವಸ್ಥಾನದ ಹತ್ತಿರ ಅತ್ಯಂತ ಸಡಗರ-ಸಂಭ್ರಮ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ರಾಯಚೂರು ತಾಲೂಕು ಅಧ್ಯಕ್ಷರಾದ ಶ್ರೀಯುತ ವೀರೇಶ್ ಸೋನಾ ಅವರು ಊರಿನ ಮುಖಂಡರು ಹಾಗೂ ಗುರುಹಿರಿಯರ ಸಮ್ಮುಖದಲ್ಲಿ ಧ್ವಜಾರೋಹಣ ನೆರವೇರಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ವೃಂದ, ಶಾಲಾ ಮಕ್ಕಳು ಹಾಗೂ ಊರಿನ ಸಮಸ್ತ ಸಾರ್ವಜನಿಕರು ಅತ್ಯುತ್ಸಾಹದಿಂದ ಭಾಗವಹಿಸಿದ್ದರು. ಕಾರ್ಯಕ್ರಮಕ್ಕೆ ಆಗಮಿಸಿದ್ದ ಶಾಲಾ ಮಕ್ಕಳಿಗೆ ಪ್ರೋತ್ಸಾಹಕವಾಗಿ ನೋಟ್‌ಬುಕ್‌ಗಳು ಹಾಗೂ ಪೆನ್ನುಗಳನ್ನು ವಿತರಿಸಿ ಶುಭ ಹಾರೈಸಲಾಯಿತು.

ಗಣ್ಯರ ಉಪಸ್ಥಿತಿ:

ಮೂರನೇಯ ಪುಟಕ್ಕೆ

ನ. 3 ರಿಂದ 5 ವರೆಗೂ ನಾಟಕೋತ್ಸವ

ರಾಯಚೂರು,ನ. 2-

ರಂಗಭೂಮಿ ಕಲೆ, ಕನ್ನಡ ಸಾಹಿತ್ಯ ಹಾಗೂ ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಕರ್ನಾಟಕ ನಾಟಕ ಅಕಾಡೆಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಯಚೂರು ಹಾಗೂ ರಂಗಸಿರಿ ಸಾಂಸ್ಕೃತಿಕ ಕಲಾಬಳಗ ಸಂಯುಕ್ತಾಶ್ರಯದಲ್ಲಿ ನವೆಂಬರ್ 3 ರಿಂದ 5 ರವರೆಗೆ ಮೂರು ದಿನಗಳ ಜಿಲ್ಲಾ ನಾಟಕೋತ್ಸವ ಆಯೋಜಿಸಲಾಗಿದೆ ಎಂದು ರಂಗಸಿರಿ ಸಾಂಸ್ಕೃತಿಕ ಕಲಾಬಳಗದ ಅಧ್ಯಕ್ಷ ರಂಗಸ್ವಾಮಿ ತಿಳಿಸಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆಮಾತನಾಡಿ,ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಪ್ರತಿದಿನ ಸಂಜೆ 6 ಗಂಟೆಗೆ ನಾಟಕ ಪ್ರದರ್ಶನಗಳು ನಡೆಯಲಿವೆ. ಜಿಲ್ಲೆಯ ರಂಗಭೂಮಿ ಕಲಾವಿದರಿಗೆ ಸೂಕ್ತ ವೇದಿಕೆ ಕಲ್ಪಿಸುವುದರ ಜತೆಗೆ ನಾಟಕಗಳ ಮೂಲಕ ಸಾಮಾಜಿಕ, ಸಾಂಸ್ಕೃತಿಕ ಹಾಗೂ ಐತಿಹಾಸಿಕ ಮೌಲ್ಯಗಳನ್ನು ಜನರಿಗೆ ಪರಿಚಯಿಸುವುದು ನಾಟಕೋತ್ಸವದ ಪ್ರಮುಖ ಉದ್ದೇಶವಾಗಿದೆ ಎಂದರು.

ನ.3ರಂದು ಉದ್ಘಾಟನೆ: 'ರಮಾಭಾಯಿ ಅಂಬೇಡ್ಕರ್' ನಾಟಕ ಪ್ರದರ್ಶನ:



ನವೆಂಬರ್ 3ರಂದು ನಾಟಕೋತ್ಸವ ಉದ್ಘಾಟನೆಯಾಗಲಿದ್ದು, ಹೆಚ್.ಟಿ. ಪೋತೆ ರಚನೆಯ ಹಾಗೂ ಪದ್ಮಾ ಕೋಟಾ ನಿರ್ದೇಶನದ 'ರಮಾಭಾಯಿ ಅಂಬೇಡ್ಕರ್' ನಾಟಕ ಪ್ರದರ್ಶನಗೊಳ್ಳಲಿದೆ. ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಕಾರ್ಯಕ್ರಮ ಉದ್ಘಾಟಿಸಲಿದ್ದು, ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಡಾ. ಶಿ.ವಿ. ನಾಗರಾಜ್ ಅಧ್ಯಕ್ಷತೆ ವಹಿಸಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಶುಭರಾಣಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಸಾಹಿತ್ಯ ಕ್ಷೇತ್ರದ ವೀರಹನುಮಾನ, ವಾದ್ಯ ಸಂಗೀತ ಕ್ಷೇತ್ರದ ರಘುಪತಿ ಪೂಜಾರ ದಿನ್ನಿ ಹಾಗೂ ಪತ್ರಿಕಾ ಮಾಧ್ಯಮ ಕ್ಷೇತ್ರದಲ್ಲಿ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದ ರಘುನಾಥ ರೆಡ್ಡಿ ಮನ್ಸಲಾಪುರ ಅವರನ್ನು ಸನ್ಮಾನಿಸಿ ಗೌರವಿಸಲಾಗುವುದು.

ನ.4ರಂದು 'ಕಲ್ಯಾಣ ಕ್ರಾಂತಿಯ ಮುನ್ನುಡಿ' :

ನವೆಂಬರ್ 4ರಂದು ಎರಡನೇ ದಿನದ ಕಾರ್ಯಕ್ರಮ ನಡೆಯಲಿದ್ದು, ರಾಯಚೂರು ನಗರ ಶಾಸಕ ಡಾ. ಎಸ್. ಶಿವರಾಜ್ ಪಾಟೀಲ್ ಉದ್ಘಾಟಿಸಲಿದ್ದಾರೆ. ಚಂದ್ರಶೇಖರ ಪಾಟೀಲ್ ಮಿರ್ಜಾಪುರ ಅಧ್ಯಕ್ಷತೆ ವಹಿಸಲಿದ್ದಾರೆ. ಈ ದಿನ ಬೆಟ್ಟಪ್ಪ ಕಸ್ತೂರಿ ಅತ್ತನೂರು ಸಿರವಾರ ಹಾಗೂ ತಂಡದವರು ಜಯಶ್ರೀ ಮಹಾಜನಶೆಟ್ಟಿ ಅವರ

ಮೂರನೇಯ ಪುಟಕ್ಕೆ

ಯುವಕರು ಮೊಬೈಲ್ ಆಟ, ಆನ್‌ಲೈನ್ ಬೆಟ್ಟಿಂಗ್‌ನಿಂದ ದೂರವಿದ್ದು ವ್ಯಾಯಾಮಕ್ಕೆ ಆದ್ಯತೆ ನೀಡಲಿ: ಎಸ್ಪಿ ಅರುಣಾಂಗ್ಷು ಗಿರಿ

ರಾಯಚೂರು

ಇಂದಿನ ಯುವಕರು ಮೊಬೈಲ್‌ನಲ್ಲಿ ಪಬ್ಜಿ ಆಟ ಆಡುವುದು ಹಾಗೂ ಆನ್‌ಲೈನ್ ಬೆಟ್ಟಿಂಗ್ ಆ್ಯಪ್‌ಗಳಲ್ಲಿ ಕಾಲ ಕಳೆಯುವುದನ್ನು ಬಿಟ್ಟು, ದೈಹಿಕ ಚಟುವಟಿಕೆಗಳತ್ತ ಹೆಚ್ಚು ಗಮನಹರಿಸಬೇಕು. ಆರೋಗ್ಯಕರ ಜೀವನ ನಡೆಸಲು ನಿಯಮಿತ ವ್ಯಾಯಾಮ ಮತ್ತು ದೈಹಿಕ ಸದೃಢತೆ ಅತ್ಯಗತ್ಯ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಹೇಳಿದರು.

ನಗರದ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಭಾನುವಾರ ಎನ್.ಎಸ್. ಬೋಸರಾಜು ಫೌಂಡೇಷನ್, ಆರ್ಯಾ ನ್ಯೂಟ್ರಿಷನ್ ಕ್ಲಬ್, ಪವರ್ ಫಿಟ್‌ನೆಸ್, ಕರ್ನಾಟಕ ಬಾಡಿ ಬಿಲ್ಡರ್‌ಗಳ ಅಸೋಸಿಯೇಷನ್, ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘ ಹಾಗೂ ಭಾರತೀಯ ಬಾಡಿ ಬಿಲ್ಡರ್‌ಗಳ ಸಂಘದ ಸಹಯೋಗದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಕರ್ನಾಟಕ ರತ್ನ2026 ದೇಹದಾರ್ಢ್ಯ ಸ್ಪರ್ಧೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಹದಾರ್ಢ್ಯ ಪಟುಗಳ ಶಿಸ್ತು, ಪರಿಶ್ರಮ ಹಾಗೂ ದೈಹಿಕ ಕಟ್ಟುಮಸ್ತನ್ನು ಕಂಡು ಯುವಕರು ಸ್ಫೂರ್ತಿ ಪಡೆಯಬೇಕು. ಎಲ್ಲರೂ ಬಾಡಿ ಬಿಲ್ಡಿಂಗ್‌ನಲ್ಲೇ ತೊಡಗಿಸಿಕೊಳ್ಳಬೇಕೆಂದಿಲ್ಲ. ಆದರೆ,



ಉತ್ತಮ ಆರೋಗ್ಯಕ್ಕಾಗಿ ಪ್ರತಿಯೊಬ್ಬರೂ ತಮ್ಮ ದಿನಚರಿಯಲ್ಲಿ ವ್ಯಾಯಾಮ ಮತ್ತು ದೈಹಿಕ ಚಟುವಟಿಕೆಗಳನ್ನು ಅಳವಡಿಸಿಕೊಳ್ಳಬೇಕು. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿರುವ ಸ್ಪರ್ಧಿಗಳಿಗೆ ಶುಭ ಹಾರೈಸುತ್ತೇನೆ ಎಂದರು.

ಸ್ಪರ್ಧೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ 200ಕ್ಕೂ ಹೆಚ್ಚು ದೇಹದಾರ್ಢ್ಯ ಪಟುಗಳು ಪಾಲ್ಗೊಂಡು ತಮ್ಮ ದೈಹಿಕ ಸಾಮರ್ಥ್ಯ ಪ್ರದರ್ಶಿಸಿದರು. ಬೈಸೆಪ್ಸ್, ಚೆಸ್ಟ್, ಥೈಸ್ ಸೇರಿದಂತೆ ವಿವಿಧ ಭಂಗಿಗಳಲ್ಲಿ ಮೈಕಟ್ಟು ಪ್ರದರ್ಶಿಸಿದ ಸ್ಪರ್ಧಿಗಳಿಗೆ ಕ್ರೀಡಾಂಗಣದಲ್ಲಿ ನೆರೆದಿದ್ದ ಪ್ರೇಕ್ಷಕರು ಚಪ್ಪಾಳೆ ಮೂಲಕ ಪ್ರೋತ್ಸಾಹ ನೀಡಿದರು.

ಸ್ಪರ್ಧೆ ಆರಂಭಕ್ಕೂ ಮುನ್ನ ಹಲವು ಸ್ಪರ್ಧಿಗಳು ವೇದಿಕೆಯ ಸಮೀಪ ತಾಲೀಮು ನಡೆಸಿ ಅಂತಿಮ ಹಂತದ ಸಿದ್ಧತೆ ಮಾಡಿಕೊಂಡಿದ್ದರು. ಕರ್ನಾಟಕ ರಾಜ್ಯೋತ್ಸವದ ಸಂಭ್ರಮದ ನಡುವೆ ಆಯೋಜಿಸಲಾಗಿದ್ದ ಈ ರಾಜ್ಯಮಟ್ಟದ ಸ್ಪರ್ಧೆ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು. ರಾಜ್ಯೋತ್ಸವದ ಸಂದರ್ಭದಲ್ಲಿ ಇಂತಹ ಸ್ಪರ್ಧೆ ಆಯೋಜಿಸಿರುವುದಕ್ಕೆ ಸ್ಪರ್ಧಿಗಳು ಸಂತಸ ವ್ಯಕ್ತಪಡಿಸಿದರು.

ರಾಯಚೂರು ಜಿಲ್ಲಾ ದೇಹದಾರ್ಢ್ಯ ಸಂಘದ ಸಂಸ್ಥಾಪಕ ಸುಧಾಕರ್ ಎಲ್., ಅಂತರರಾಷ್ಟ್ರೀಯ ದೇಹದಾರ್ಢ್ಯ ಪಟು

3ನೇಯ ಪುಟಕ್ಕೆ

ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿ ಪ್ರಾಧ್ಯಾಪಕರ ನೇಮಕಾತಿ ಆರೋಪ: ಕೃಷಿ ವಿವಿ ಕುಲಸಚಿವರಿಗೆ ಜಿಲ್ಲಾಧಿಕಾರಿ ನೋಟಿಸ್

ರಾಯಚೂರು: ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ-2026ರ ಮಾದರಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದ ಸಂದರ್ಭದಲ್ಲಿ ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಅಕ್ರಮ ಹಾಗೂ ಅನಧಿಕೃತ ಪ್ರಾಧ್ಯಾಪಕರ ಹುದ್ದೆಗಳಿಗೆ ಅನುಮೋದನೆ ನೀಡಿ ನೇಮಕಾತಿ ಆದೇಶಗಳನ್ನು ಹೊರಡಿಸಲಾಗಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಈ ಸಂಬಂಧ ರಾಯಚೂರು ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಡಾ. ಎಂ. ಹನುಮಂತಪ್ಪ ನಾಯಕ ಅವರು ವಿಶ್ವವಿದ್ಯಾಲಯದ ಕುಲಸಚಿವರಿಗೆ ನೋಟಿಸ್ ಜಾರಿಗೊಳಿಸಿದ್ದಾರೆ.

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದ ಅವಧಿಯಲ್ಲಿ ವಿಶ್ವವಿದ್ಯಾಲಯದ ಕುಲಸಚಿವರು ಹಾಗೂ ಆಡಳಿತ ಮಂಡಳಿಯವರು ಪ್ರಾಧ್ಯಾಪಕರ ಹುದ್ದೆಗಳಿಗೆ ಅನುಮೋದನೆ ನೀಡಿ ನೇಮಕಾತಿ ಆದೇಶಗಳನ್ನು ಹೊರಡಿಸಿರುವುದು ನಿಯಮಬಾಹಿರವಾಗಿದೆ. ಈ ಮೂಲಕ ಚುನಾವಣಾ ನೀತಿ ಸಂಹಿತೆಯನ್ನು ಉಲ್ಲಂಘಿಸಲಾಗಿದೆ ಎಂದು ಆರೋಪಿಸಿ ರವಿಕುಮಾರ ಗಬ್ಬೂರು ಅವರು ಅಕ್ಟೋಬರ್ 31ರಂದು ಜಿಲ್ಲಾಧಿಕಾರಿಗಳ ಕಚೇರಿಗೆ ದೂರು ಸಲ್ಲಿಸಿದ್ದರು. ನೇಮಕಾತಿ ಆದೇಶಗಳನ್ನು ಹೊರಡಿಸಿದ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತಕ್ಷಣ ಕಠಿಣ ಕ್ರಮ ಕೈಗೊಳ್ಳುವಂತೆ ಅವರು ದೂರಿನಲ್ಲಿ ಒತ್ತಾಯಿಸಿದ್ದರು.

ದೂರಿನ ಹಿನ್ನೆಲೆಯಲ್ಲಿ ಅಕ್ಟೋಬರ್ 31ರಂದು ನೋಟಿಸ್ ಹೊರಡಿಸಿರುವ ಜಿಲ್ಲಾಧಿಕಾರಿಗಳು, ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದ ಅವಧಿಯಲ್ಲಿ ನೇಮಕಾತಿ ಆದೇಶಗಳನ್ನು ಹೊರಡಿಸಿರುವುದಕ್ಕೆ ಸಂಬಂಧಿಸಿದ ನೇಮಕಾತಿ ಪ್ರಕ್ರಿಯೆಯ ಹಿನ್ನೆಲೆ, ಆದೇಶಗಳನ್ನು ಹೊರಡಿಸಲು ಹೊಂದಿರುವ ಅಧಿಕಾರ ಮತ್ತು ಅನುಮತಿಗಳು ಹಾಗೂ ನೀತಿ ಸಂಹಿತೆ ಉಲ್ಲಂಘನೆಯಾಗಿಲ್ಲ ಎಂಬುದಕ್ಕೆ ಪೂರಕವಾದ ಸಮಗ್ರ ದಾಖಲೆಗಳೊಂದಿಗೆ ಲಿಖಿತ ಸಮಜಾಯಿಷಿ ಸಲ್ಲಿಸುವಂತೆ ಸೂಚಿಸಿದ್ದಾರೆ.

ನೋಟಿಸ್ ತಲುಪಿದ ಮೂರು ದಿನಗಳೊಳಗಾಗಿ ಸಂಬಂಧಪಟ್ಟ ಅಧಿಕಾರಿಗಳು ತಮ್ಮ ಸ್ಪಷ್ಟೀಕರಣವನ್ನು

ಮೂರನೇಯ ಪುಟಕ್ಕೆ

ಮೋದಿ, ಅಮಿತ್ ಶಾ, ಜ್ಞಾನೇಶ್ ಕುಮಾರ್ ಅಕ್ರಮಗಳ ಪ್ರಮುಖ ಆರೋಪಿಗಳು: ಸಚಿವ ಪ್ರಿಯಾಂಕ್ ಖರ್ಗೆ

ಕಲಬುರಗಿ

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ () ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳಿಗೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರೇ ಪ್ರಮುಖ ಆರೋಪಿಗಳು ಎಂದು ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದರು.



ನಗರದ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಕಾಂಗ್ರೆಸ್ ಕೇಳುತ್ತಿರುವ ಪ್ರಶ್ನೆಗಳಿಗೆ ಬಿಜೆಪಿ ನಾಯಕರು ಉತ್ತರಿಸುವ ಬದಲು ಚುನಾವಣಾ ಆಯೋಗವೇ ಸ್ಪಷ್ಟನೆ ನೀಡಬೇಕು. ಮತದಾರರ ಪಟ್ಟಿಯಿಂದ ಕೋಟ್ಯಂತರ ಮತದಾರರ ಹೆಸರುಗಳನ್ನು ಕೈಬಿಟ್ಟಿರುವ ಕುರಿತು ಪ್ರಶ್ನಿಸುವುದು ತಪ್ಪೇ ಎಂದು ಪ್ರಶ್ನಿಸಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರು ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಹಲವು ಪ್ರಶ್ನೆಗಳನ್ನು ಎತ್ತಿದ್ದಾರೆ. ಆದರೆ ಬಿಜೆಪಿ ನಾಯಕರು ಮಾತ್ರ ಉತ್ತರಿಸುತ್ತಿದ್ದಾರೆಯೇ ಹೊರತು ಚುನಾವಣಾ ಆಯೋಗ ಮೌನವಾಗಿದೆ. ಕಾಂಗ್ರೆಸ್ ಯಾವುದೇ ವಿಷಯ ಪ್ರಸ್ತಾಪಿಸಿದರೂ ತಕ್ಷಣ ಪ್ರತಿಕ್ರಿಯಿಸುತ್ತಿದ್ದ ಚುನಾವಣಾ ಆಯೋಗ, ಕಳೆದ ಒಂದೂವರೆ ತಿಂಗಳಿನಿಂದ ಕೇಳಲಾಗುತ್ತಿರುವ ಪ್ರಶ್ನೆಗಳಿಗೆ ಉತ್ತರಿಸುತ್ತಿಲ್ಲ ಎಂದು ಟೀಕಿಸಿದರು.

ಸುಮಾರು 13.2 ಕೋಟಿ ಮತದಾರರನ್ನು ಯಾವುದೇ ಸಮರ್ಪಕ ಕಾರಣವಿಲ್ಲದೆ ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಶೇ.15ರಷ್ಟು ಮತದಾರರ ಹೆಸರುಗಳನ್ನು ತೆಗೆದುಹಾಕಿರುವ ಕುರಿತು ಪ್ರಶ್ನಿಸುವುದು ತಪ್ಪೇ? ಚುನಾವಣಾ ಆಯೋಗದ ನಿರ್ಧಾರಗಳನ್ನು ಮೂವರು ಆಯುಕ್ತರು ಒಟ್ಟಾಗಿ ಕೈಗೊಳ್ಳಬೇಕಾದ ಸಂದರ್ಭದಲ್ಲಿ, ಇಬ್ಬರು ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಿದ್ದರೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದ್ದೇಕೆ ಎಂದು ಪ್ರಶ್ನಿಸಿದರು.

ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲು ಫಾರ್ಮ್-7 ಅರ್ಜಿಗಳನ್ನು ದುರುಪಯೋಗ ಪಡಿಸಿಕೊಳ್ಳಲಾಗುತ್ತಿದೆ. ಕೆಲವು ಕಡೆಗಳಲ್ಲಿ ಬಿಜೆಪಿ ಮತ್ತು ಆರೆಸ್ಸೆಸ್ ಕಾರ್ಯಕರ್ತರು ಅರ್ಜಿಗಳನ್ನು ಸಲ್ಲಿಸಿ ಮತದಾರರ ಹೆಸರುಗಳನ್ನು ತೆಗೆಸಲು ಪ್ರಯತ್ನಿಸಿದ್ದಾರೆ. ವಿಜಯಪುರದಲ್ಲಿ ಮೃತಪಟ್ಟಿದ್ದಾರೆ ಎಂದು ಸುಳ್ಳು ದೂರು ನೀಡಿರುವುದು ಹಾಗೂ ಚಿತ್ತಾಪುರದಲ್ಲಿ ಒಂದು ಸಮುದಾಯದ 40 ಜನರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲು ಯತ್ನಿಸಿರುವ ಪ್ರಕರಣಗಳು ಬೆಳಕಿಗೆ ಬಂದಿವೆ ಎಂದು ಆರೋಪಿಸಿದರು.

ಚಿತ್ತಾಪುರದಲ್ಲಿ ಪರಿಶೀಲನೆ ನಡೆಸಿದಾಗ ಸಂಬಂಧಪಟ್ಟ ಮತದಾರರು ಅಲ್ಲಿಯೇ ವಾಸವಾಗಿದ್ದು, ಸ್ಥಳಾಂತರಗೊಂಡಿಲ್ಲ ಎಂಬುದು ಗೊತ್ತಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪ್ರಕರಣದ ಕುರಿತು ಎಫ್‌ಐಆರ್ ದಾಖಲಿಸಬೇಕು ಎಂದು ಸೂಚಿಸಿದ್ದರು ಎಂದು ತಿಳಿಸಿದರು.

ಚುನಾವಣಾ ಆಯೋಗದ ಸಾಫ್ಟ್‌ವೇರ್ ಬದಲಾಯಿಸಿದ್ದು ಯಾರು? ಲಾಗಿನ್ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಿ ದುರುಪಯೋಗಕ್ಕೆ ಅವಕಾಶ ಕಲ್ಪಿಸಿದ್ದು ಯಾರು? ಫಾರ್ಮ್-6 ಪ್ರಕ್ರಿಯೆಯಲ್ಲಿ ಬದಲಾವಣೆ ತಂದವರು ಯಾರು? ಇಸಿಐನ ಇರೋನೆಟ್ ಜಾಲತಾಣದಲ್ಲಿ ಬದಲಾವಣೆ ಮಾಡಲು ಅನುಮತಿ ನೀಡಿದವರು ಯಾರು? ಎಂಬ ಪ್ರಶ್ನೆಗಳಿಗೆ ಉತ್ತರ ಸಿಗಬೇಕಿದೆ ಎಂದು ಹೇಳಿದರು.

ಎಸ್‌ಐಆರ್ ಪ್ರಕರಣದಲ್ಲಿ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಆರೋಪಿಗಳೆಂದು ಉಲ್ಲೇಖಿಸಿದ ಪ್ರಿಯಾಂಕ್ ಖರ್ಗೆ, ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಸಮಗ್ರ ತನಿಖೆಯಾಗಬೇಕು. ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಬಿಜೆಪಿ ನಾಯಕರು ಈ ವಿಷಯದಲ್ಲಿ ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿರುವುದನ್ನು ಉಲ್ಲೇಖಿಸಿದ ಅವರು, ಪಿಯೂಷ್ ಗೋಯಲ್ ಅವರು ಈ ಹಿಂದೆ ಬೀದಿಗಿಳಿದು ಪ್ರತಿಭಟನೆಗಳಲ್ಲಿ ಭಾಗವಹಿಸಿದ ಉದಾಹರಣೆ ಇಲ್ಲ. ಈಗ ಅವರು ಬೀದಿಗಿಳಿದಿರುವುದು ಎಲ್ಲವೂ ಬಹಿರಂಗವಾಗುತ್ತಿದೆ ಎಂಬುದನ್ನು ತೋರಿಸುತ್ತದೆ ಎಂದು ಟೀಕಿಸಿದರು.

ವಿದ್ಯಾರ್ಥಿಗಳ ಪ್ರತಿಭಟನೆಗೆ ವಿದೇಶಿ ಹಣಕಾಸು ನೆರವು ಹಾಗೂ ಅವರ ಹಿಂದೆ ವಿದೇಶಿ ಕೈವಾಡವಿದೆ ಎಂಬ ಆರೋಪಗಳನ್ನು ಮಾಡುವವರು ಅದಕ್ಕೆ ಪುರಾವೆ ನೀಡಬೇಕು. ಸರ್ಕಾರ ನಿಮ್ಮದೇ ಇರುವಾಗ ದಾಖಲೆಗಳನ್ನು ಯಾಕೆ ನೀಡುತ್ತಿಲ್ಲ ಎಂದು ಸವಾಲು ಹಾಕಿದರು.

ಬಿಜೆಪಿ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಅವರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಅವರು, ಹಿರಿಯ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಬಗ್ಗೆ ಮಾತನಾಡುವವರು ಖರ್ಗೆ ಅವರ ರಾಜಕೀಯ ಅನುಭವದಷ್ಟು ತಮ್ಮ ವಯಸ್ಸಿದೆಯೇ ಎಂಬುದನ್ನು ಮರೆಯಬಾರದು. ತಮ್ಮ ರಾಜಕೀಯ ಗುರು ಪ್ರಧಾನಿ ನರೇಂದ್ರ ಮೋದಿ ಅವರು ಪತ್ರಿಕಾಗೋಷ್ಠಿ ನಡೆಸಿ ಪತ್ರಕರ್ತರ ಪ್ರಶ್ನೆಗಳಿಗೆ ಉತ್ತರಿಸಲಿ ಎಂದು ಸವಾಲು ಹಾಕಿದರು.

ಬಿಜೆಪಿಯವರು ಗೆದ್ದಾಗ ಮತದಾನ ವ್ಯವಸ್ಥೆಯ ಬಗ್ಗೆ ಪ್ರಶ್ನಿಸುವುದಿಲ್ಲ. ತಾವು ಗೆದ್ದರೂ ಐಟಿ-ಬಿಟಿ ಸಚಿವನಾಗಿ ಚುನಾವಣಾ ವ್ಯವಸ್ಥೆಯ ಪಾರದರ್ಶಕತೆಗಾಗಿ ಎಥಿಕಲ್ ಹ್ಯಾಕಥಾನ್ ನಡೆಸುವಂತೆ ಹೇಳಿದ್ದೇನೆ. ಇದಕ್ಕೆ ವಿರೋಧ ವ್ಯಕ್ತಪಡಿಸುವ ಅಗತ್ಯವೇನು ಎಂದು ಪ್ರಶ್ನಿಸಿದರು.

ರಾಜ್ಯದ ನಾಲ್ಕು ವಿಧಾನ ಪರಿಷತ್ ಕ್ಷೇತ್ರಗಳ ಚುನಾವಣೆಯಲ್ಲಿ ಸೋತರೆ ಅದು 2028ರ ವಿಧಾನಸಭಾ ಚುನಾವಣೆಗೆ ದಿಕ್ಸೂಚಿಯಾಗಲಿದೆ ಎಂಬ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ವಾರಾಣಸಿ ಹಾಗೂ ನಾಗಪುರದಲ್ಲಿಯೂ ಮೋದಿ ಅವರು ಸೋತಿದ್ದಾರೆ. ಹಾಗಾದರೆ ಅದನ್ನು ಮುಂದಿನ ಚುನಾವಣೆಯ ದಿಕ್ಸೂಚಿ ಎನ್ನಬಹುದೇ? ಬ್ಯಾಲೆಟ್ ಪೇಪರ್‌ನಲ್ಲಿ ಗೆಲ್ಲುವವರು ಮುಂದಿನ ಚುನಾವಣೆಯನ್ನೂ ಬ್ಯಾಲೆಟ್ ಪೇಪರ್‌ನಲ್ಲೇ ಎದುರಿಸಲಿ ಎಂದು ಸವಾಲು ಹಾಕಿದರು.

ರೈತರ ಸಮಸ್ಯೆಗಳಿಗೆ ಸರ್ಕಾರ ಸ್ಪಂದನೆ :

ಈ ವರ್ಷ ಮಳೆಯ ಪ್ರಮಾಣದಲ್ಲಿ ಕೊರತೆಯಾಗಿದ್ದು, ನದಿ ಹಾಗೂ ಜಲಮೂಲಗಳು ಬತ್ತಿಹೋಗಿವೆ. ಜಿಲ್ಲೆಯ 11 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಗ್ರೌಂಡ್ ಟ್ರೂತ್ ಪ್ರಕ್ರಿಯೆ ನಡೆಯುತ್ತಿದೆ. ಬೆಳೆ ನಷ್ಟದ ಕುರಿತು ಜಂಟಿ ಸಮೀಕ್ಷೆ ನಡೆಸಲಾಗುತ್ತಿದೆ. ಬೆಳೆ ವಿಮೆ ಮತ್ತು ಪರಿಹಾರ ವಿತರಣೆಗೆ ಸರ್ಕಾರ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

ಕಬ್ಬು ಬೆಳೆಗಾರರ ಸಮಸ್ಯೆ ಕುರಿತು ಮಾತನಾಡಿದ ಅವರು, ಕಬ್ಬು ಬೆಳೆಗಾರರಿಗೆ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ನೀಡುವ ಪ್ರಕ್ರಿಯೆ ಇದೆ. ರೈತರ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಮುಖ್ಯಮಂತ್ರಿ ಅವರು ರೈತರೊಂದಿಗೆ ಚರ್ಚೆ ನಡೆಸಿದ್ದಾರೆ. ರೈತರ ಮೇಲೆ ಅನಗತ್ಯ ಒತ್ತಡ ಹೇರಬಾರದು ಎಂದು ಮನವಿ ಮಾಡಿದರು.

ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಅವರು, ರೈತರ ಆದಾಯವನ್ನು ದ್ವಿಗುಣಗೊಳಿಸುವ ಭರವಸೆ ನೀಡಿದ್ದವರು ಈಗ ರೈತರ ಸಮಸ್ಯೆಗಳ ಬಗ್ಗೆ ಏಕೆ ಮಾತನಾಡುತ್ತಿಲ್ಲ? ರೈತರ ಪ್ರತಿಭಟನಾ ಸ್ಥಳಕ್ಕೆ ಕೇಂದ್ರದ ಯಾವ ಸಚಿವರು ಭೇಟಿ ನೀಡಿದ್ದಾರೆ ಎಂಬುದನ್ನು ತಿಳಿಸಲಿ ಎಂದು ಪ್ರಶ್ನಿಸಿದರು.

ಕೇಂದ್ರ ಸರ್ಕಾರದ ಯೋಜನೆಗಳ ಅನುಷ್ಠಾನಕ್ಕೆ ರಾಜ್ಯ ಸರ್ಕಾರವೇ ಹಣ ಭರಿಸಬೇಕಾದ ಪರಿಸ್ಥಿತಿ ಇದೆ. ಕೇಂದ್ರ ಪ್ರಾಯೋಜಿತ ಯೋಜನೆಗಳಿಂದ ರಾಜ್ಯದ ಮೇಲಿನ ಆರ್ಥಿಕ ಹೊರೆ ಕುರಿತು ಚರ್ಚೆಯಾಗಬೇಕು. ರೈತರ ಬೆಳೆ ವಿಮೆ, ಬೆಂಬಲ ಬೆಲೆ ಹಾಗೂ ಪರಿಹಾರದ ವಿಚಾರಗಳಲ್ಲಿ ಕೇಂದ್ರ ಸರ್ಕಾರವೂ ತನ್ನ ಜವಾಬ್ದಾರಿ ನಿರ್ವಹಿಸಬೇಕು ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಮೂಲಕ ಬಯೋ ಎಕಾನಮಿ ಯೋಜನೆಗೆ ಚಾಲನೆ ನೀಡಲಾಗಿದೆ. ಕೃಷಿಯಲ್ಲಿ ತಂತ್ರಜ್ಞಾನ ಬಳಕೆಗೆ ಆದ್ಯತೆ ನೀಡಲಾಗುತ್ತಿದ್ದು, ಡ್ರೋನ್ ಮೂಲಕ ಔಷಧ ಸಿಂಪಡಣೆ ಸೇರಿದಂತೆ ಹೊಸ ಪ್ರಯೋಗಗಳನ್ನು ಕಲಬುರಗಿಯಲ್ಲಿ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಭೀಮಾ ನದಿಯಿಂದ 15 ಟಿಎಂಸಿ ನೀರು ಹರಿಸಲು ಮನವಿ :

ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದ ಜಲಮೂಲಗಳು ಬತ್ತಿಹೋಗಿದ್ದು, ಕುಡಿಯುವ ನೀರು ಮತ್ತು ಕೃಷಿಗೆ ನೀರಿನ ಸಮಸ್ಯೆ ಎದುರಾಗುತ್ತಿದೆ. ಮಹಾರಾಷ್ಟ್ರದಿಂದ ಭೀಮಾ ನದಿಗೆ 15 ಟಿಎಂಸಿ ನೀರು ಬಿಡುಗಡೆ ಮಾಡುವಂತೆ ಮನವಿ ಮಾಡಲಾಗಿದೆ. ನೀರು ಬಿಡುವುದಾಗಿ ಅಲ್ಲಿನವರು ಭರವಸೆ ನೀಡಿದ್ದಾರೆ. ಯಾವಾಗ ನೀರು ಹರಿಸುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ ಎಂದರು.

ಪ್ರತಿ ತಾಲೂಕಿಗೆ 1 ಕೋಟಿ ರೂ. ಅನುದಾನ ನೀಡಲಾಗುತ್ತಿದ್ದು, ಕೊಳವೆಬಾವಿ ಸೇರಿದಂತೆ ಅಗತ್ಯ ಕಾಮಗಾರಿಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ. ಭೀಮಾ ನದಿ ನೀರಿನ ಹಂಚಿಕೆ ವಿಚಾರವನ್ನು ಸರ್ವಪಕ್ಷ ನಿಯೋಗದ ಮೂಲಕವೂ ಪ್ರಸ್ತಾಪಿಸಲಾಗಿದೆ. ಮುಂದಿನ ಕಾನೂನು ಕ್ರಮಗಳ ಕುರಿತು ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ :

ಎಚ್‌ಎಂಟಿ, ಎನ್‌ಎಎಲ್, ಉಕ್ಕಿನ ಕಾರ್ಖಾನೆ, ಎಚ್‌ಎಎಲ್ ಹಾಗೂ ಡಿಆರ್‌ಡಿಒದಂತಹ ಸಂಸ್ಥೆಗಳನ್ನು ಸ್ಥಾಪಿಸಿದ್ದು ಕಾಂಗ್ರೆಸ್ ಸರ್ಕಾರ. ಈಗ ಕುಮಾರಸ್ವಾಮಿ ಅವರು ಎಚ್‌ಎಂಟಿ ಕಂಪನಿಯ ಎರಡು ಹೊಸ ವಾಚ್‌ಗಳನ್ನು ತರುವುದನ್ನೇ ಪ್ರಚಾರ ಮಾಡಿಕೊಳ್ಳುತ್ತಿದ್ದಾರೆ. ಕೇಂದ್ರ ಸಚಿವರಾಗಿರುವ ಅವರು ರಾಜ್ಯದಲ್ಲಿ ಹೊಸ ಕೈಗಾರಿಕೆಗಳನ್ನು ಸ್ಥಾಪಿಸಿದ್ದಾರೆಯೇ ಎಂದು ಪ್ರಶ್ನಿಸಿದರು.

ಮುಂದುವರಿದು ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದ ಅವರು, ತಮ್ಮ ಇಲಾಖೆಯಿಂದ 11 ನೀತಿಗಳನ್ನು ಜಾರಿಗೆ ತಂದಿದ್ದೇನೆ. ಆದರೆ ಅವರು ಸ್ಟಿಂಗ್ ಪ್ರಕರಣದ ನಿಜಾಂಶ ಹೊರಬರಬೇಕು ಎಂದು ಹೇಳಿದ್ದರು. ಪ್ರಕರಣದಲ್ಲಿ ಬಂಧನವಾಗಿ ನಿಜಾಂಶ ಹೊರಬಂದಾಗ ಪಾದಯಾತ್ರೆ ಮಾಡುವುದೇಕೆ ಎಂದು ವ್ಯಂಗ್ಯವಾಡಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ, ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಕನ್ನಡ ನಾಡು, ನುಡಿ ಸಂರಕ್ಷಣೆಗೆ ಸರಕಾರ ಬದ್ಧವಾಗಿದೆ : ಸಚಿವ ಈಶ್ವರ್ ಖಂಡ್ರೆ

ಬೀದರ್ :

ಕನ್ನಡ ಭಾಷೆ, ನಾಡು, ನುಡಿಯ ಸಂರಕ್ಷಣೆಯ ಜೊತೆಗೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದ್ದು, ಶಿಕ್ಷಣ, ಕೃಷಿ, ಗ್ರಾಮೀಣಾಭಿವೃದ್ಧಿ, ಪ್ರವಾಸೋದ್ಯಮ, ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರು ಹೇಳಿದರು.

ನಗರದ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 71ನೇ ಕನ್ನಡ ರಾಜ್ಯೋತ್ಸವದ ಧ್ವಜರೋಹಣ ನೆರವೇರಿಸಿ ಮಾತನಾಡಿದ ಅವರು, ಕನ್ನಡ ಕೇವಲ ಭಾಷೆಯಾಗದೆ ನಮ್ಮ ಉಸಿರು ಮತ್ತು ಬದುಕಾಗಬೇಕು. ಮಕ್ಕಳಲ್ಲಿ ಕನ್ನಡಾಭಿಮಾನ ಬೆಳೆಸುವುದರ ಜೊತೆಗೆ ಅನ್ಯಭಾಷಿಕರನ್ನೂ ಕನ್ನಡದ ಮುಖ್ಯವಾಹಿನಿಗೆ ತರಬೇಕು ಎಂದರು.

ಬಸವಕಲ್ಯಾಣದಲ್ಲಿ 750 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಅನುಭವ ಮಂಟಪ ನಿರ್ಮಾಣವಾಗುತ್ತಿದ್ದು, ಶೇ.80ರಷ್ಟು ಕಾಮಗಾರಿ ಪೂರ್ಣಗೊಂಡಿದೆ. 2027ರ ಮೇ ತಿಂಗಳ ಬಸವ ಜಯಂತಿಯ ವೇಳೆಗೆ ಕಾಮಗಾರಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. 770 ಅಮರಗಣಂಗಳ ಹೆಸರಿನಲ್ಲಿ 770 ಕಂಬಗಳನ್ನು ನಿರ್ಮಿಸಲಾಗುತ್ತಿದ್ದು, ರೋಬೋಟಿಕ್ ತಂತ್ರಜ್ಞಾನದ ಮೂಲಕ ಬಸವಣ್ಣ, ಅಲ್ಲಮಪ್ರಭು, ಅಕ್ಕಮಹಾದೇವಿ ಸೇರಿದಂತೆ 20 ಶರಣರ ಸಂಭಾಷಣೆಯ ಪ್ರಾತ್ಯಕ್ಷಿಕೆ ರೂಪಿಸಲಾಗುತ್ತಿದೆ. ಇಷ್ಟಲಿಂಗಪೂಜೆಯ ವೈಜ್ಞಾನಿಕ ಅನುಭವಕ್ಕೂ ಅವಕಾಶ ಕಲ್ಪಿಸಲಾಗಿದೆ. ಐಐಟಿ ಹೈದ್ರಾಬಾದ್ ಮತ್ತು ಐಐಟಿ ಖರಗಪೂರದ ನೆರವಿನಿಂದ ವೈದ್ಯಕೀಯ ಉಪಕರಣವೊಂದನ್ನು ವಿಶೇಷವಾಗಿ ರೂಪಿಸಲಾಗಿದ್ದು, ಅನುಭವ ಮಂಪಟಕ್ಕೆ ಬರುವ ಬಸವ ಭಕ್ತರಿಗೆ ಹಾಗೂ ಸಂದರ್ಶಕರಿಗೆ ವೈಜ್ಞಾನಿಕವಾಗಿ ಇಷ್ಟಲಿಂಗ ಪೂಜೆ ಮಾಡುವುದರಿಂದ ಮನಸ್ಸು , ಮೆದುಳು ಮತ್ತು ದೇಹದ ಮೇಲೆ ಆಗುವ ಪರಿಣಾಮದ ಸಾಕ್ಷಾತ್ ಅನುಭವ ಪಡೆಯುವ ಅವಕಾಶವನ್ನೂ ಕಲ್ಪಿಸಲಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಈ ಬಾರಿ ಎಲ್‌ನಿನೋ ಪ್ರಭಾವದಿಂದ ಮಳೆಯ ಪ್ರಮಾಣ ಕಡಿಮೆಯಾಗಿ ಭೀಕರ ಬರಗಾಲ ಉಂಟಾಗಿದೆ. ಜಿಲ್ಲೆಯ ಯಾವುದೇ ತಾಲೂಕಿನಲ್ಲಿ ಯಾವುದೇ ಗ್ರಾಮದಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಅಭಾವ ತಲೆದೋರದಂತೆ ಕ್ರಮವಹಿಸಲು ಸೂಚಿಸಲಾಗಿದ್ದು, ರಾಜ್ಯದಲ್ಲಿ ಗ್ರಾಮೀಣ ಕುಡಿಯುವ ನೀರಿನ ನಿರ್ವಹಣೆಗಾಗಿ ಸರ್ಕಾರ ಇದುವರೆಗೆ ಒಟ್ಟು 306 ಕೋಟಿ ರೂ. ಅನುದಾನ ಬಿಡುಗಡೆ ಮಾಡಿದೆ. ಈ ಪೈಕಿ ಬೀದರ ಜಿಲ್ಲೆಗೆ 11 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಜನರಿಗೆ ಇರುವಲ್ಲಿಯೇ ಉದ್ಯೋಗ ನೀಡಿ ಗುಳೆ ಹೋಗುವುದನ್ನು ತಪ್ಪಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ 3,175 ಕೋಟಿ ರೂ. ವೆಚ್ಚದಲ್ಲಿ 5,885 ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇದರಲ್ಲಿ 4,838 ಕಾಮಗಾರಿಗಳು ಪೂರ್ಣಗೊಂಡಿವೆ. ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 21 ಲಕ್ಷಕ್ಕೂ ಹೆಚ್ಚು ಮಾನವ ಉದ್ಯೋಗ ದಿನಗಳನ್ನು ಸೃಷ್ಟಿಸಲಾಗಿದ್ದು, 156 ಗ್ರಾಮ ಪಂಚಾಯಿತಿಗಳಲ್ಲಿ ಕೂಸಿನ ಮನೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು.

ಕಲಬುರಗಿ ಚಿರಂಜೀವಿ ದೊಡ್ಡಪ್ಪ ಅಪ್ಪ ಜನ್ಮದಿನದ ಅಂಗವಾಗಿ ಉಚಿತ ನೇತ್ರ ತಪಾಸಣಾ ಶಿಬಿರ

ಕಲಬುರಗಿ:

ಪೂಜ್ಯ ಶ್ರೀ ಚಿರಂಜೀವಿ ದೊಡ್ಡಪ್ಪ ಅಪ್ಪ ಅವರ ಜನ್ಮದಿನದ ಪ್ರಯುಕ್ತ ನಗರದ ಕೋಟನೂರು (ಡಿ) ಪ್ರವೇಶದ ಕೆಸರಟಗಿ ರಸ್ತೆಯಲ್ಲಿರುವ, ಆಕಾಶವಾಣಿ ಹಿಂಭಾಗ ಹಾಗೂ ಸಮಾಧಾನ ಮಠದ ಸಮೀಪದ ಅನುಗ್ರಹ ಕಣ್ಣಿನ ಆಸ್ಪತ್ರೆಯಲ್ಲಿ ಆಯೋಜಿಸಿದ್ದ ಉಚಿತ ನೇತ್ರ ತಪಾಸಣಾ ಶಿಬಿರಕ್ಕೆ ಪೂಜ್ಯ ಶ್ರೀ ಚಿರಂಜೀವಿ ದೊಡ್ಡಪ್ಪ ಅಪ್ಪ ಅವರು ಚಾಲನೆ ನೀಡಿದರು.



ಅನುಗ್ರಹ ಕಣ್ಣಿನ ಆಸ್ಪತ್ರೆ (ಭೋರುಕಾ ನೇತ್ರಾಲಯ), ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಫ್ಯಾಮಿಲಿ ಟ್ರಸ್ಟ್, ಶರಣಬಸವೇಶ್ವರ ಸಂಸ್ಥಾನ ಹಾಗೂ ಶರಣಬಸವ ವಿಶ್ವವಿದ್ಯಾಲಯಂದ' ಸಹಯೋಗದಲ್ಲಿ ಶಿಬಿರ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಕುಮಾರಿ ಭವಾನಿ, ಶರಣಬಸವ ವಿಶ್ವವಿದ್ಯಾಲಯಂದ' ಕುಲಸಚಿವರಾದ ಲಕ್ಷ್ಮೀ ಪಾಟೀಲ್ ಮಾಕಾ, ಡಾ. ಅಲ್ಲಮಪ್ರಭು ದೇಶಮುಖ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಡಾ. ಪ್ರಭುಗೌಡ ಬಿ.ಎಲ್. ಮತ್ತು ಡಾ. ಮಾಲಿನಿ ಪ್ರಭುಗೌಡ ಅವರ ನೇತೃತ್ವದಲ್ಲಿ ಬೆಳಿಗ್ಗೆ 9ರಿಂದ ಸಂಜೆ 4ರವರೆಗೆ ಶಿಬಿರ ನಡೆಯಿತು. ಕೋಟನೂರು (ಡಿ) ಪ್ರದೇಶದ ಕೆಸರಟಗಿ ರಸ್ತೆಯಲ್ಲಿರುವ ಅನುಗ್ರಹ ಕಣ್ಣಿನ ಆಸ್ಪತ್ರೆ

(ಭೋರುಕಾ ನೇತ್ರಾಲಯ) ಹಾಗೂ ಅಶೋಕ ನಗರ ಪೊಲೀಸ್ ಠಾಣೆ ಎದುರು, ಬಸ್ ನಿಲ್ದಾಣದ ಹಿಂಭಾಗದಲ್ಲಿರುವ ಅನುಗ್ರಹ ಕಣ್ಣಿನ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಉಚಿತ ನೇತ್ರ ತಪಾಸಣೆ ನಡೆಸಲಾಯಿತು.

ಶಿಬಿರದಲ್ಲಿ ಕಣ್ಣಿನ ಪೊರೆ (ಮೋತಿಬಿಂದು) ಮತ್ತು ಟೆರಿಜಿಯಂ ಶಸ್ತ್ರಚಿಕಿತ್ಸೆಗಳನ್ನು ವಿಶೇಷ ರಿಯಾಯಿತಿ ದರದಲ್ಲಿ ಮಾಡಿಸಿಕೊಳ್ಳಲು ವ್ಯವಸ್ಥೆ ಕಲ್ಪಿಸಲಾಗಿತ್ತು. ನೇತ್ರ ತಜ್ಞರು ಸಾರ್ವಜನಿಕರಿಗೆ ಕಣ್ಣಿನ ಆರೋಗ್ಯದ ಕುರಿತು ಸೂಕ್ತ ಸಲಹೆ ಹಾಗೂ ಮಾರ್ಗದರ್ಶನ ನೀಡಿದರು.

ಶಿಬಿರದಲ್ಲಿ ಒಟ್ಟು 890 ಹೊರರೋಗಿಗಳು (ಒಪಿಡಿ) ನೇತ್ರ ತಪಾಸಣೆ ಮಾಡಿಸಿಕೊಂಡರು.

ಕಲಬುರಗಿಯನ್ನು ಸುಸ್ಥಿರ, ಉದ್ಯೋಗಸೃಷ್ಟಿಯ ನಗರವನ್ನಾಗಿ ರೂಪಿಸುವ ಸಂಕಲ್ಪ: ಸಚಿವ ಪ್ರಿಯಾಂಕ್ ಖರ್ಗೆ

ಕಲಬುರಗಿ:

ಕಲಬುರಗಿಯನ್ನು ಸುಸ್ಥಿರ ಹಾಗೂ ಉದ್ಯೋಗಸೃಷ್ಟಿಯ ನಗರವನ್ನಾಗಿ ರೂಪಿಸುವ ಸಂಕಲ್ಪ ಮಾಡಲಾಗಿದೆ. ನಗರದ ಸಮಗ್ರ ಅಭಿವೃದ್ಧಿಗಾಗಿ ಮಾಸ್ಟರ್ ಪ್ಲ್ಯಾನ್ ಸಿದ್ಧಪಡಿಸಲಾಗಿದ್ದು, ವಿದೇಶಿ ಬಂಡವಾಳ ಆಕರ್ಷಣೆ, ಯುವಕರಿಗೆ ಉದ್ಯೋಗಾವಕಾಶ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.



ನಗರದ ಗಂಜ್ ಪ್ರದೇಶದ ನಗರೇಶ್ವರ ಶಾಲಾ ಆವರಣದಲ್ಲಿ ರವಿವಾರ 71ನೇ ಕನ್ನಡ ರಾಜ್ಯೋತ್ಸವದ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಕಲಬುರಗಿ ನಗರದ ಅಭಿವೃದ್ಧಿಗಾಗಿ ರೂಪಿಸಿರುವ ಯೋಜನೆಗಳ ಫಲಿತಾಂಶ ಮುಂದಿನ ಎರಡು ವರ್ಷಗಳಲ್ಲಿ ಗೋಚರಿಸಲಿದೆ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಯುವಕರನ್ನು ಸಜ್ಜುಗೊಳಿಸಲು ಪ್ರಬುದ್ಧ ಅಕಾಡೆಮಿ ಸ್ಥಾಪಿಸಲಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಖಾಸಗಿ ಸಹಭಾಗಿತ್ವ ಪಡೆಯುವ ಉದ್ದೇಶದಿಂದ ಕಲಬುರಗಿ ನೆಕ್ಸ್ಟ್ ಫೌಂಡೇಶನ್ ಆರಂಭಿಸಲಾಗಿದೆ ಎಂದರು.

ಕಲ್ಯಾಣ ಕರ್ನಾಟಕದ ಆರ್ಥಿಕ ಪ್ರಗತಿಗೆ ಸರ್ಕಾರ ಆದ್ಯತೆ ನೀಡಿದೆ. ಸೆಪ್ಟೆಂಬರ್ 17ರಂದು ಮುಖ್ಯಮಂತ್ರಿ ಅವರು ಕಲ್ಯಾಣ ಕರ್ನಾಟಕ ಎಕನಾಮಿಕ್ ಮಿಷನ್ ಘೋಷಿಸಿದ್ದಾರೆ. ರಾಜ್ಯದ ಒಟ್ಟು ಜಿಡಿಪಿಗೆ ಬೆಂಗಳೂರು ಶೇ.40ರಷ್ಟು ಕೊಡುಗೆ ನೀಡುತ್ತಿದ್ದರೆ, ಕಲಬುರಗಿ ಜಿಲ್ಲೆಯ ಪಾಲು ಶೇ.1.9ರಷ್ಟಿದೆ. ಈ ಪ್ರಮಾಣವನ್ನು ಹೆಚ್ಚಿಸುವುದು ನಮ್ಮ ಗುರಿಯಾಗಿದೆ ಎಂದು ತಿಳಿಸಿದರು.

ಎಲೆಕ್ಟ್ರಾನಿಕ್ಸ್, ಟೆಕ್ಸ್‌ಟೈಲ್ಸ್ ಹಾಗೂ ಬಯೋ ಎಕನಾಮಿಕ್ ಮಿಷನ್ ಮೂಲಕ ಆರ್ಥಿಕ ಅಭಿವೃದ್ಧಿಗೆ ಹೊಸ ಅವಕಾಶಗಳನ್ನು ಸೃಷ್ಟಿಸಲಾಗುತ್ತಿದೆ. ಕೃಷಿ ಕ್ಷೇತ್ರದಲ್ಲಿ ತಂತ್ರಜ್ಞಾನದ ಬಳಕೆಗೆ ಉತ್ತೇಜನ ನೀಡುವುದರ ಜೊತೆಗೆ, ಕಲಬುರಗಿ ತೊಗರಿ ಹಾಗೂ ಕಮಲಾಪುರ ಬಾಳೆಹಣ್ಣಿಗೆ ಹೆಚ್ಚಿನ ಮಾರುಕಟ್ಟೆ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಕನ್ನಡ ಕೇವಲ ಭಾಷೆಯಲ್ಲ, ಅದು ಭಾವನೆ, ಇತಿಹಾಸ, ವಿಚಾರ ಮತ್ತು ಆಚಾರಗಳ ಸಂಗಮವಾಗಿದೆ. ಕನ್ನಡದ ಶ್ರೀಮಂತ ಸಾಹಿತ್ಯ ಪರಂಪರೆ ಹಾಗೂ ನಾಡಿನ ಸಾಂಸ್ಕೃತಿಕ ವೈವಿಧ್ಯವನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಕಲಬುರಗಿಯ ಅಭಿವೃದ್ಧಿ ಕೇವಲ ಜನಪ್ರತಿನಿಧಿಗಳ ಜವಾಬ್ದಾರಿಯಲ್ಲ. ಅಧಿಕಾರಿಗಳು, ಶಿಕ್ಷಕರು, ಪತ್ರಕರ್ತರು ಹಾಗೂ ಸಾರ್ವಜನಿಕರ ಸಹಭಾಗಿತ್ವವೂ ಅಗತ್ಯವಾಗಿದೆ. ಯುವಕರಿಗೆ ಗುಣಮಟ್ಟದ ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಉದ್ಯೋಗಾವಕಾಶಗಳನ್ನು ಕಲ್ಪಿಸುವ ಮೂಲಕ ಅಭಿವೃದ್ಧಿಯ ಪಯಣದಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ, ಶಶೀಲ್ ನಮೋಶಿ, ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ, ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಬ್ರಿಮ್ಸ್ ಆಸ್ಪತ್ರೆಯಲ್ಲಿ ಪೌಷ್ಟಿಕ ಆಹಾರ ಕೊಠಡಿ ಉದ್ಘಾಟಿಸಿದ ಸಚಿವ ಈಶ್ವರ್ ಖಂಡ್ರೆ

ಬೀದರ್

ನಗರದ ಬ್ರಿಮ್ಸ್ ಆಸ್ಪತ್ರೆಯಲ್ಲಿ ಮಹಿಳಾ ರೋಗಿಗಳು ಹಾಗೂ ಬಾಣಂತಿಯರಿಗೆ ಪೌಷ್ಟಿಕ ಆಹಾರ ಸರಬರಾಜು ಮಾಡುವ ಉದ್ದೇಶದಿಂದ ನೂತನವಾಗಿ ನಿರ್ಮಿಸಲಾದ ಸುಸಜ್ಜಿತ ಪೌಷ್ಟಿಕ ಆಹಾರ ಕೋಣೆಯನ್ನು ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರು ಶನಿವಾರ ಉದ್ಘಾಟಿಸಿದರು.



ಉದ್ಘಾಟನೆಯ ನಂತರ ಅವರು ಆಸ್ಪತ್ರೆಯ ವಾರ್ಡ್‌ಗಳಿಗೆ ಖುದ್ದಾಗಿ ಭೇಟಿ ನೀಡಿ, ಚಿಕಿತ್ಸೆ ಪಡೆಯುತ್ತಿರುವ ಮಹಿಳಾ ರೋಗಿಗಳಿಗೆ ಹಾಗೂ ಬಾಣಂತಿಯರಿಗೆ ಪೌಷ್ಟಿಕ ಆಹಾರ ವಿತರಿಸಿದರು.

ಈ ವೇಳೆ ರೋಗಿಗಳ ಆರೋಗ್ಯ ವಿಚಾರಿಸಿದ ಸಚಿವರು, ಆಸ್ಪತ್ರೆಯಲ್ಲಿ ದೊರೆಯುತ್ತಿರುವ ವೈದ್ಯಕೀಯ ಸೌಲಭ್ಯಗಳು, ನೈರ್ಮಲ್ಯ ಮತ್ತು ಊಟದ ಗುಣಮಟ್ಟದ ಕುರಿತು ಸಾರ್ವಜನಿಕರಿಂದ ನೇರವಾಗಿ ಮಾಹಿತಿ ಪಡೆದುಕೊಂಡರು. ಬಳಿಕ ಮಾತನಾಡಿದ ಅವರು, ಆಸ್ಪತ್ರೆಗೆ ದಾಖಲಾಗುವ ರೋಗಿಗಳ ಶೀಘ್ರ ಚೇತರಿಕೆಗೆ ವೈದ್ಯಕೀಯ ಚಿಕಿತ್ಸೆಯ ಜೊತೆಗೆ ಸತ್ವಯುತ ಹಾಗೂ ಶುಚಿ-ರುಚಿಯಾದ ಆಹಾರ ನೀಡುವುದು ಅತ್ಯಗತ್ಯವಾಗಿದೆ. ಈ ನಿಟ್ಟಿನಲ್ಲಿ ನೂತನವಾಗಿ ಆರಂಭಿಸಿದ ಆಹಾರ ಕೋಣೆಯು ರೋಗಿಗಳಿಗೆ ನಿರಂತರವಾಗಿ ಉತ್ತಮ ದರ್ಜೆಯ ಆಹಾರ ಪೂರೈಸಲು ನೆರವಾಗಲಿದೆ ಎಂದರು. ಆಸ್ಪತ್ರೆಗೆ ಆಗಮಿಸುವ ಪ್ರತಿಯೊಬ್ಬ ಬಡ ರೋಗಿಗೂ ಗುಣಮಟ್ಟದ ಚಿಕಿತ್ಸೆ ಸಿಗುವಂತೆ ನೋಡಿಕೊಳ್ಳಬೇಕು ಎಂದು ವೈದ್ಯಾಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕ ರಹೀಂ ಖಾನ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠಲರಾವ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ್ ಪೂಜಾರಿ, ಸಹಾಯಕ ಆಯುಕ್ತ ಅಭಿನವ್ ಜೈನ್, ಬ್ರಿಮ್ಸ್ ನಿರ್ದೇಶಕಿ ಡಾ. ಶಾಂತಲಾ ಕೌಜಲಗಿ ಹಾಗೂ ಮುಖ್ಯ ಆಡಳಿತಾಧಿಕಾರಿ ಪ್ರಕಾಶ್ ಸೂರ್ಯವಂಶಿ ಸೇರಿದಂತೆ ಜಿಲ್ಲಾ ಶಸ್ತ್ರಚಿಕಿತ್ಸಕರು, ವೈದ್ಯರು, ಆರೋಗ್ಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತ 'ರಿದ್ದರು.

ಬೀದರ್ ವೀರಶೆಟ್ಟಿ ಎರಂಡಗೆ ಅವರಿಗೆ ತಾಲೂಕು ಮಟ್ಟದ ರಾಜ್ಯೋತ್ಸವ ಪ್ರಶಸ್ತಿ

ಬಸವಕಲ್ಯಾಣ :

ಮಾಧ್ಯಮ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಬಸವಕಲ್ಯಾಣ ತಾಲೂಕು ಆಡಳಿತ ವತಿಯಿಂದ ವಾರ್ತಾ ಭಾರತಿ ತಾಲೂ ಕು ವರದಿಗಾರ ವೀರಶೆಟ್ಟಿ ಎರಂಡಗೆ ಅವರಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಪತ್ರಿಕೋದ್ಯಮದ ಮೂಲಕ ಸ್ಥಳೀಯ ಸಮಸ್ಯೆಗಳು, ಜನಸಾಮಾನ್ಯರ ಧ್ವನಿ ಹಾಗು ಸಾರ್ವಜನಿಕರ ಹಿತಾಸಕ್ತಿಗಳ ವಿಷಯಗಳನ್ನು ವರದಿಗಳ ಮೂಲಕ ಬೆಳಕಿಗೆ ತರುತ್ತಿರುವುದನ್ನು ಪರಿಗಣಿಸಿ ರವಿವಾರ ನಡೆದ 71ನೇ ಕನ್ನಡ ರಾಜ್ಯೋತ್ಸವ ದಿನದಂದು



ವೀರಶೆಟ್ಟಿ ಎರಂಡಗೆ ಅವರಿಗೆ ತಾಲೂಕು ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ನೀಡಲಾಯಿತು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತ ಪ್ರಕಾಶ್ ಕುದುರೆ, ತಹಶೀಲ್ದಾರ್ ದತ್ತಾತ್ರೇಯ ಜೇ ಗಾದ, ಇಓ ರಮೇಶ್ ಸುಲ್ಫಿ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ದಿಲೀಪ್ ಉತ್ತಮ್, ಸಿಎಂಸಿ ಪೌರಾಯುಕ್ತ ರಾಜು ಬಣಕಾರ್ ಹಾಗೂ ಸಿಪಿಐ ಆಲಿಸಾಬ್ ಸೇರಿದಂತೆ ಹಲವರಿದ್ದರು.

ಒಂದನೇಯ ಪುಟದಿಂದ

ನ. 3 ರಿಂದ 5 ವರೆಗೂ ನಾಟಕೋತ್ಸವ

ರಚನೆ ಮತ್ತು ನಿರ್ದೇಶನದಲ್ಲಿ 'ಕಲ್ಯಾಣ ಕ್ರಾಂತಿಯ ಮುನ್ನುಡಿ' ನಾಟಕವನ್ನು ಪ್ರದರ್ಶಿಸಲಿದ್ದಾರೆ.

ನ.5ರಂದು ಸಮಾರೋಪ: 'ಶಿವಶರಣ ಕಂಬಳಿ ನಾಗೀದೇವ' ಪ್ರದರ್ಶನ:ನ. 5ರಂದು ನಾಟಕೋತ್ಸ ವದ ಸಮಾರೋಪ ಸಮಾರಂಭ ನಡೆಯಲಿದ್ದು, ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅಧ್ಯಕ್ಷತೆ ವಹಿಸಲಿದ್ದಾರೆ. ದೇವಣ್ಣ ಬಿಚ್ಚಾಲಿ ಅವರ ನಿರ್ದೇಶನದಲ್ಲಿ 'ಶಿವಶರಣ ಕಂಬಳಿ ನಾಗೀದೇವ' ನಾಟಕ ಪ್ರದರ್ಶನಗೊಳ್ಳಲಿದೆ. ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಚಾಂದಪಾಶ ಸೇರಿದಂತೆ ಹಲವು ಗಣ್ಯರು, ಕಲಾವಿದರು ಹಾಗೂ ರಂಗಾಸಕ್ತರು ಪಾಲ್ಗೊಳ್ಳಲಿದ್ದಾರೆ.ಮೂರು ದಿನಗಳ ನಾಟಕೋತ್ಸ ವದಲ್ಲಿ ಜಿಲ್ಲೆಯ ಹಿರಿಯ ರಂಗಭೂಮಿ ಕಲಾವಿದರು, ಸಾಹಿತಿಗಳು, ಜಾನಪದ ಕಲಾವಿದರು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಭಾಗವಹಿಸಲಿದ್ದಾರೆ. ರಂಗಭೂಮಿ ಕೇವಲ ಮನರಂಜನೆಯ ಮಾಧ್ಯಮವಲ್ಲ. ಅದು ಸಮಾಜದ ನೋವು-ನಲಿವು, ಹೋರಾಟ, ಸಂಸ್ಕೃತಿ, ಇತಿಹಾಸ ಹಾಗೂ ಜೀವನ ಮೌಲ್ಯಗಳನ್ನು ಪ್ರತಿಬಿಂಬಿಸುವ ಪ್ರಬಲ ಕಲಾಮಾಧ್ಯಮವಾಗಿದೆ. ಇಂತಹ ಕಲೆಯನ್ನು ಉಳಿಸಿ, ಮುಂದಿನ ಪೀಳಿಗೆಗೆ ಪರಿಚಯಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.ಜಿಲ್ಲೆಯ ಕಲಾಭಿಮಾನಿಗಳು, ಸಾಹಿತ್ಯಾಸಕ್ತರು, ಸಾರ್ವಜನಿಕರು ಹಾಗೂ ರಂಗಾಸಕ್ತರು ಮೂರು ದಿನಗಳ ನಾಟಕೋತ್ಸ ವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ರಂಗಭೂಮಿ ಕಲೆಯ ಬೆಳವಣಿಗೆಗೆ ಪ್ರೋತ್ಸಾ ಹ ನೀಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ವೆಂಕಟನರಸಿಂಹಲು, ಚಂದ್ರಶೇಖರ ಏಗನೂರು, ಜೋಸೆಫ್ ಆಶಾಪುರ, ರಾಜೇಂದ್ರ ಹಾಗೂ ಅಯ್ಯನಗೌಡ ಉಪಸ್ಥಿತರಿದ್ದರು.

ಕಾರ್ಮಿಕರ ಹಕ್ಕುಗಾಗಿ ಪಾರ್ಲಿಮೆಂಟ್ ಚಲೋ ಪೋಸ್ಟರ್ ಬಿಡುಗಡೆ

ಹೋರಾಟ ನಡೆಯಲಿದೆ.ದೇಹಲಿಯಲ್ಲಿ ನಡೆಯುವ ಪಾರ್ಲಿಮೆಂಟ್ ಚಲೋ ಹೋರಾಟವನ್ನು ಯಶಸ್ವ ಗೊಳಿಸಲು ಕರೆ ನೀಡಿದರು ಈ ಪ್ರಚಾರಾಂದೋಲನದಲ್ಲಿ ಅಂಗನವಾಡಿ. ಬಿಸಿಯೂಟ, ಪಂಚಾಯತ್ ನೌಕರ ರು, ಕಟ್ಟಡ. ಹಮಾಲಿ. ಫ್ಯಾಕ್ಟರಿ ಕಾರ್ಮಿಕರು ಭಾಗವಹಿಸಿ ತಮ್ಮ ಕೆಲಸದ ಸ್ಥಳಗಳಲ್ಲಿ ಪೋಸ್ಟರ್ ಬಿಡುಗಡೆ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಹೆಚ್. ಪದ್ಮಾ.ಮುಖಂಡರಾದ ವರಲಕ್ಷ್ಮಿ ಕಲ್ಯಾಣಮ್ಮ. ವಿದ್ಯಾಶ್ರೀ. ಚಂದ್ರಕಲಾ, ಗೋಕು ರಮ್ಮ, ನಿರ್ಮಲ, ಅಕ್ಕಮಹಾದೇವಿ.ಮಮತಾ, ಫರೀನ್ ಸೇರಿದಂತೆ ಅಂಗನವಾಡಿ ನೌಕರ ರುಉಪಸ್ಥಿತರಿದ್ದರು.ಇಂದು ರಾಯಚೂರು ತಾಲೂಕಿನಲ್ಲಿ ಅಂಗನವಾಡಿ. ಬಿಸಿಯೂಟ. ಪಂಚಾಯತ್ ನೌಕರರು ತಮ್ಮ ಕೆಲಸದ ಸ್ಥಳಗಳಲ್ಲಿ ಪೋಸ್ಟರ್ ಬಿಡುಗಡೆ ಮಾಡಿದರು.

ಗಾರಲದಿನ್ನಿದಲ್ಲಿ ವಿಜೃಂಭಣೆಯಿಂದ ಜರುಗಿದ ಕರ್ನಾಟಕ ರಾಜ್ಯೋತ್ಸವ: ವಿದ್ಯಾರ್ಥಿಗಳಿಗೆ ನೋಟ್‌ಬುಕ್ - ಪೆನ್ ವಿತರಣೆ

ಈ ವಿಶೇಷ ಕಾರ್ಯಕ್ರಮದಲ್ಲಿ ಗಾರಲದಿನ್ನಿ ಗ್ರಾಮದ ಹಾಗೂ ಸುತ್ತಮುತ್ತಲಿನ ಹಿರಿಯರು, ಪೂಜ್ಯರು ಮತ್ತು ವಿವಿಧ ರಂಗಗಳ ಮುಖಂಡರು ಉಪಸ್ಥಿತರಿದ್ದು ಕಾರ್ಯಕ್ರಮದ ಶೋಭೆಯನ್ನು ಹೆಚ್ಚಿಸಿದರು.

ಈ ಸಂದರ್ಭದಲ್ಲಿ ಎನ್. ತಿಪ್ಪಯ್ಯಶೆಟ್ಟಿ,ಜಿ. ಸಿದ್ದನಗೌಡ ಪೊಲೀಸ್ ಪಾಟೀಲ್, ಶ್ರೀ ಶಿವಣ್ಣ ತಾತ ಆರೋಲಿ, ಅನಿಲ್ ಕುಮಾರ್ ಧಣಿ , ಜಿ.ಮೌಲಾಲಿ ತಟ , ಯೂಸುಬಲಿ , ಬಸನಗೌಡ ಬಿಕಾಂ ಪಾಟೀಲ್, ಮಾದೇವ ನಾಯಕ್ , ಭೀಮರಾಯ ಸಾರಾಯಿ, ದೊಡ್ಡ ಭೀಮಣ್ಣ ,ಶ್ರೀ ಗುರುಪ್ರಸಾದ್ ಶೆಟ್ಟಿ,ಮಹೇಶ್ ತಾತ,ಸುರೇಶ್ ಪಟೇಲ್, ಬೇವನೂರು ಬಸವರಾಜ ನಾಯಕ್ , ವೀರೇಶ್ ಹೊಸ್ಮನಿ , ವೆಂಕಟೇಶ್ ಪಾಪಣ್ಣ , ಲಕ್ಷ್ಮಣ್ ಇಳಿಗೆರೆ,ರಾಮಚಂದ್ರ ಉಪ್ಪಾರ್ ,ವೀರೇಶ್ ಒಗ್ಗರಣೆ, ಮಾರಪ್ಪ ತಟ್ಟ,ಜಿ. ಡನೆಲ್ ಜಗ್ಗಯ್ಯನವರ,ಮುಕ್ತಲೆಯ ಉಪ್ಪಾರ್, ಬೋಳಬಂಡಿ ಗರಡಪ್ಪ ,ಸೀನು ಆಡುಪಾದಿ, ಹಾಗೂ ಶಾಲೆಯ ಶಿಕ್ಷಕ ವೃಂದ, ವಿದ್ಯಾರ್ಥಿಗಳು, ಗ್ರಾಮದ ಸಮಸ್ತ ಗುರುಹಿರಿಯರು, ಯುವಕರು ಮತ್ತು ಸಾರ್ವಜನಿಕರು ಅಪಾರ ಸಂಖ್ಯೆಯಲ್ಲಿ ಭಾಗವಹಿಸಿ ಕರ್ನಾಟಕ ರಾಜ್ಯೋತ್ಸವವನ್ನು ಯಶಸ್ವಿಗೊಳಿಸಿದರು

ವಂದೇ ಭಾರತ್ ಸ್ಲೀಪರ್ ರೈಲು ಸೇವೆಯಿಂದ ಕಲ್ಯಾಣ ಕರ್ನಾಟಕಕ್ಕೆ ಹೊಸ ವೇಗ; ಬಹುದಿನಗಳ ಬೇಡಿಕೆ ಈಡೇರಿಕೆ - ಬಾಬುರಾವ್

ಮಾಜಿ ಸಂಸದ ರಾಜಾ ಅಮರೇಶ್ ನಾಯಕ ಮಾತನಾಡಿ ಈ ರೈಲು ಸೇವೆಯಿಂದ ಕಲ್ಯಾಣ ಕರ್ನಾಟಕ ಭಾಗದ ರೈಲ್ವೆ ಸಂಪರ್ಕ ಮತ್ತಷ್ಟು ಬಲಗೊಳ್ಳಲಿದ್ದು, ವ್ಯಾಪಾರ, ಉದ್ಯೋಗ, ಶಿಕ್ಷಣ ಹಾಗೂ ಪ್ರವಾಸೋದ್ಯಮ ಕ್ಷೇತ್ರಗಳ ಅಭಿವೃದ್ಧಿಗೂ ಸಹಕಾರಿಯಾಗಲಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ, ಸಿಕಂದರಾಬಾದ್‌ನ ಡಿಆರ್‌ಎಂ ಗೋಪಾಲ ಕೃಷ್ಣ, ಸ್ಟೇಷನ್ ಮಾಸ್ಟರ್ ಅಶೋಕ ಕುಮಾರ್ ಮೀನಾ, ಓಂ ಪ್ರಕಾಶ್, ಹೇಮರಾಜ್,

ಬಸವರಾಜ್, ಮಾರೆಪ್ಪ, ಚಂದ್ರು, ಚಂದ್ರಶೇಖರ್, ಪಂಪನಗೌಡ, ದರೂರ ಬಸವರಾಜ್ ಸೇರಿದಂತೆ ರೈಲ್ವೆ ಪೊಲೀಸರು, ಸಿಬ್ಬಂದಿಗಳು ಹಾಗೂ ಸಾವಿರಾರು ಜನರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕಲಾವಿದರ ಪ್ರತಿಭೆಗೆ ಹೊಸ ವೇದಿಕೆ - ವೀರೇಂದ್ರ ಜಲ್ದಾರ್ ಅವರ ಮಹತ್ವದ ಹೆಜ್ಜೆ

ಕಲಾವಿದರಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಪ್ರೋತ್ಸಾ ಹ ನೀಡಿದಾಗ ಮಾತ್ರ ಕಲೆ ಮತ್ತು ಸಂಸ್ಕೃತಿಯ ಬೆಳವಣಿಗೆ ಸಾಧ್ಯ. ಕೇವಲ ಪ್ರಸಿದ್ಧ ಕಲಾವಿದರಿಗೆ ಮಾತ್ರವಲ್ಲದೆ, ಹೊಸದಾಗಿ ಕಲಾ ಕ್ಷೇತ್ರಕ್ಕೆ ಪ್ರವೇಶಿಸುವ ಗ್ರಾಮೀಣ ಭಾಗದ ಪ್ರತಿಭೆಗಳಿಗೂ ಅವಕಾಶ ಕಲ್ಪಿಸುವುದು ಈ ಸಂಘದ ವಿಶೇಷ ಆಶಯವಾಗಿದೆ.

ದಿವಂಗತ ಡಾ. ಪುನೀತ್ ರಾಜ್‌ಕುಮಾರ್ ಅವರ ಹೆಸರಿನಲ್ಲಿ ಆರಂಭಗೊಂಡಿರುವ ಈ ಸಂಘವು ಅವರ ಮಾನವೀಯತೆ, ಸರಳತೆ ಮತ್ತು ಸಮಾಜಮುಖಿ ಚಿಂತನೆಗಳಿಗೆ ಗೌರವ ಸಲ್ಲಿಸುವ ವೇದಿಕೆಯಾಗಲಿ ಎಂಬುದು ಎಲ್ಲರ ಆಶಯವಾಗಿದೆ.

ಒಂದು ಪ್ರತಿಭೆಗೆ ಅವಕಾಶ ನೀಡುವುದು ಒಂದು ಬದುಕಿಗೆ ಭರವಸೆ ನೀಡಿದಂತೆ; ಒಬ್ಬ ಕಲಾವಿದನನ್ನು ಪ್ರೋತ್ಸಾ ಹಿಸುವುದು ನೂರಾರು ಕನಸುಗಳಿಗೆ ಸ್ಫೂರ್ತಿ ನೀಡಿದಂತೆ.

ರಾಯಚೂರಿನ ಕಲಾ ಕ್ಷೇತ್ರದಲ್ಲಿ ಹೊಸ ಅಧ್ಯಾಯ ಆರಂಭಿಸಿರುವ ಈ ಸಂಘವು ಮುಂದಿನ ದಿನಗಳಲ್ಲಿ ಸಾವಿರಾರು ಕಲಾವಿದರಿಗೆ ಸ್ಫೂರ್ತಿಯ ಸೆಲೆಯಾಗಿ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಂಡು ಉನ್ನತ ಸಾಧನೆ ಮಾಡಲಿ ಎಂದು ಗಣ್ಯರು ಶುಭ ಹಾರೈಸಿದರು.

ಯುವಕರು ಮೊಬೈಲ್ ಆಟ, ಆನ್‌ಲೈನ್ ಬೆಟ್ಟಿಂಗ್‌ನಿಂದ ದೂರವಿದ್ದು ವ್ಯಾಯಾಮಕ್ಕೆ ಆದ್ಯತೆ ನೀಡಲಿ: ಎಸ್ಪಿ ಅರುಣಾಂಗ್ಷು ಗಿರಿ

ರಿಷಬ್ ವಸಿಷ್ಠ ಸೇರಿದಂತೆ ವಿವಿಧ ಜಿಲ್ಲೆಗಳ ಸ್ಪರ್ಧಿಗಳು ಭಾಗವಹಿಸಿದ್ದರು.

ಒಟ್ಟು ಎಂಟು ತೂಕದ ವಿಭಾಗಗಳಲ್ಲಿ ಸ್ಪರ್ಧೆ ಆಯೋಜಿಸಲಾಗಿತ್ತು. 55 ಕೆಜಿಯಿಂದ 85 ಕೆಜಿಗೂ ಅಧಿಕ ತೂಕದ ವಿಭಾಗಗಳಲ್ಲಿ ಸ್ಪರ್ಧಿಗಳು ತಮ್ಮ ಸಾಮರ್ಥ್ಯವನ್ನು ಅನಾವರಣಗೊಳಿಸಿದರು. ಪ್ರತಿ ವಿಭಾಗದಲ್ಲಿ ಮೊದಲ ಐದು ಸ್ಥಾನ ಗಳಿಸಿದವರಿಗೆ ಕ್ರಮವಾಗಿ ₹8 ಸಾವಿರ, ₹7 ಸಾವಿರ, ₹5 ಸಾವಿರ, ₹4 ಸಾವಿರ ಹಾಗೂ ₹2 ಸಾವಿರ ನಗದು ಬಹುಮಾನ ವಿತರಿಸಲಾಯಿತು.ಕರ್ನಾಟಕ ರತ್ನ ಪ್ರಶಸ್ತಿ ವಿಜೇತರಿಗೆ ₹55,555 ನಗದು ಬಹುಮಾನ ಘೋಷಿಸಲಾಗಿತ್ತು. ಮೊದಲ ರನ್ನರ್ ಅಪ್‌ಗೆ ₹22,222, ಎರಡನೇ ರನ್ನರ್ ಅಪ್‌ಗೆ ₹11,111 ಹಾಗೂ ಮೂರನೇ ರನ್ನರ್ ಅಪ್‌ಗೆ ₹5,555 ಬಹುಮಾನ ನಿಗದಿಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಶಾಂತವೀರ, ಸಿಪಿಐ ಅಮರೇಶ, ಸಿಪಿಐ ಸಾಬಯ್ಯ ನಾಯಕ, ಪೊಲೀಸ್ ಸಬ್‌ಇನ್‌ಸ್ಪೆಕ್ಟರ್ ಮಂಜುನಾಥ, ಏಕಲವ್ಯ ಪ್ರಶಸ್ತಿ ಪುರಸ್ಕೃತ ಸುನೀಲ, ವಿಜಯ ರೆಡ್ಡಿ, ಜಿ.ಡಿ. ಭಟ್, ಮಲ್ಲೇಶ ಹಾಗೂ ರವಿ ಉಪಸ್ಥಿತರಿದ್ದರು.ಸುಧಾಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಲ್ಪನಾ ನಾಯಕ ಕಾರ್ಯಕ್ರಮ ನಿರೂಪಿಸಿದರು.

ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿ ಪ್ರಾಧ್ಯಾಪಕರ ನೇಮಕಾತಿ ಆರೋಪ: ಕೃಷಿ ವಿವಿ ಕುಲಸಚಿವರಿಗೆ ಜಿಲ್ಲಾಧಿಕಾರಿ ನೋಟಿಸ್

ಸಲ್ಲಿಸಬೇಕು. ನಿಗದಿತ ಅವಧಿಯಲ್ಲಿ ಸಮಜಾಯಿಷಿ ಸಲ್ಲಿಸಲು ವಿಫಲವಾದರೆ, ಯಾವುದೇ ಸಮಜಾಯಿಷಿ ನೀಡಿಲ್ಲವೆಂದು ಪರಿಗಣಿಸಿ ಲಭ್ಯವಿರುವ ದಾಖಲೆಗಳು ಮತ್ತು ದೂರಿನ ಅಂಶಗಳ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಅಗತ್ಯ ಶಿಸ್ತು ಕ್ರಮ ಜರುಗಿಸುವ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ನೋಟಿಸ್‌ನಲ್ಲಿ ಎಚ್ಚರಿಕೆ ನೀಡಲಾಗಿದೆ.

ನೋಟಿಸ್‌ನ ಪ್ರತಿಯನ್ನು ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳು, ಕೃಷಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾಧಿಕಾರಿಗಳಿಗೂ ಮಾಹಿತಿಗಾಗಿ ರವಾನಿಸಲಾಗಿದೆ.

ದೂರು ಸಲ್ಲಿಕೆ ಸಂದರ್ಭದಲ್ಲಿ ಉಪಸ್ಥಿತಿ: ರವಿಕುಮಾರ ಗಬ್ಬೂರು ಅವರೊಂದಿಗೆ ಅವಿನಾಶ್ ಸಿಯಾತಲಾಬ್, ವೆಂಕಟೇಶ್ ರಾಮಪುರ ಹಾಗೂ ರಾಯಚೂರಿನ ಡಾ. ಬಿ.ಆರ್. ಅಂಬೇಡ್ಕರ್ ನಗರದ ಎಂ. ನರಸಿಂಹಲು ಅವರು ಉಪಸ್ಥಿತರಿದ್ದರು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ನೇಮಕಾತಿ ಪ್ರಕ್ರಿಯೆ ಇದೀಗ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದ್ದು, ಜಿಲ್ಲಾಧಿಕಾರಿಗಳ ನೋಟಿಸ್‌ಗೆ ಸಂಬಂಧಪಟ್ಟ ಅಧಿಕಾರಿಗಳು ನೀಡುವ ಉತ್ತರ ಹಾಗೂ ಅದರ ಆಧಾರದ ಮೇಲೆ ಸರ್ಕಾರ ಕೈಗೊಳ್ಳಲಿರುವ ಮುಂದಿನ ಕ್ರಮದ ಬಗ್ಗೆ ಸಾರ್ವಜನಿಕರಲ್ಲಿ ಕುತೂಹಲ ಮೂಡಿದೆ.

ಕೋಲಿ ಸಮಾಜವನ್ನು ಮುಖ್ಯವಾಹಿನಿಗೆ ತರಲು ಅಭಿವೃದ್ಧಿ ನಿಗಮ ಸ್ಥಾಪನೆ; ಸಚಿವ ಪ್ರಿಯಾಂಕ್ ಖರ್ಗೆ



ಕಲಬುರಗಿ:

ಕೋಲಿ, ಕಬ್ಬಲಿಗ, ಬೆಸ್ತ ಸೇರಿದಂತೆ 38 ಪರ್ಯಾಯ ಹೆಸರುಗಳನ್ನು ಹೊಂದಿರುವ ಸಮುದಾಯವನ್ನು ಒಗ್ಗೂಡಿಸುವಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಕೊಡುಗೆ ಮಹತ್ವದ್ದಾಗಿದೆ. ಕೋಲಿ ಸಮಾಜವನ್ನು ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಅಂಬಿಗರ ಚೌಡಯ್ಯನವರ ಅಭಿವೃದ್ಧಿ ನಿಗಮ ಸ್ಥಾಪಿಸಲಾಗಿದೆ ಎಂದು ಗೃಹ, ಐಟಿ-ಬಿಟಿ, ಇ-ಆಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ರವಿವಾರ ಜಿಲ್ಲಾ ಕೋಲಿ/ಕಬ್ಬಲಿಗ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಸಮಾವೇಶ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಅಂಬಿಗರ ಚೌಡಯ್ಯನವರ ಅಭಿವೃದ್ಧಿ ನಿಗಮ ಸ್ಥಾಪನೆಗಾಗಿ ಹಲವು ಹೋರಾಟಗಳು ನಡೆದಿವೆ. ಸಮುದಾಯದ ಮುಖಂಡರು ನಿಗಮ ಸ್ಥಾಪನೆಗೆ ಒತ್ತಾಯಿಸಿದಾಗ ಈ ಕುರಿತು ಸರಕಾರದ ಗಮನ ಸೆಳೆಯಲಾಗಿತ್ತು ಎಂದರು.

ಕೋಲಿ ಸಮಾಜದಲ್ಲಿ ಅಕ್ಷರಜ್ಞಾನ, ಸಂಸ್ಕೃತಿ ಹಾಗೂ ತಿಳಿವಳಿಕೆಯ ಕೊರತೆಯನ್ನು ಮೇಲ್ವರ್ಗದವರು ದುರುಪಯೋಗಪಡಿಸಿಕೊಂಡಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದಾಗ ಅಭಿವೃದ್ಧಿ ನಿಗಮ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಯಿತು ಎಂದು ತಿಳಿಸಿದರು.

ಕೋಲಿ ಇನ್ನಿತರ ಪಂಗಡದ ಸಮುದಾಯವನ್ನು ಪರಿಶಿಷ್ಟ ಪಂಗಡದ ಮೀಸಲಾತಿ ವಿಚಾರವಾಗಿ ಹೋರಾಟ ನಡೆಯುತ್ತಿದೆ. ಈ ಸಂಬಂಧ ಕುಲಶಾಸ್ತ್ರೀಯ ಅಧ್ಯಯನ ನಡೆಸಿ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿತ್ತು. ಆದರೆ, ಕೇಂದ್ರ ಸರಕಾರ ವರದಿಯನ್ನು ಹಿಂದಿರುಗಿಸಿದೆ. ಈ ಕುರಿತು ಅಧ್ಯಯನ ನಡೆಸುತ್ತಿರುವವರನ್ನು ಕರೆಸಿ ಚರ್ಚಿಸಿದ ಬಳಿಕ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಕಾಂಗ್ರೆಸ್ ಮತ್ತು ಬಿಜೆಪಿ ಸರಕಾರಗಳು ಈ ಸಮಾಜದ ಅಭಿವೃದ್ಧಿಗೆ ಕೆಲಸ ಮಾಡಿವೆ. ತಾವು ಬಸವಣ್ಣನವರ ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ ಅನುಯಾಯಿಯಾಗಿದ್ದು, ಅವರ ವಿಚಾರಧಾರೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಬದ್ಧರಾಗಿದ್ದೇವೆ. ಮುಂದಿನ ಪೀಳಿಗೆಗಳೂ ಸಹ ಅವರ ವಿಚಾರಗಳನ್ನು ಅಳವಡಿಸಿಕೊಳ್ಳಲು ಪೋಷಕರು ಪ್ರೋತ್ಸಾ ಹಿಸಬೇಕು ಎಂದು ಹೇಳಿದರು.

ಅಂಬಿಗರ ಚೌಡಯ್ಯನವರ 273 ವಚನಗಳು ಮಾತ್ರ ಈವರೆಗೆ ಲಭ್ಯವಾಗಿವೆ. ಯುವಜನರು ಬುದ್ಧ, ಬಸವ, ಅಂಬೇಡ್ಕರ್ ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ ತತ್ವಗಳನ್ನು ಪಾಲಿಸಬೇಕು. ಕೇವಲ ಮೂರ್ತಿಗಳನ್ನು ಸ್ಥಾಪಿಸುವುದರಿಂದ ಮಹನೀಯರ ಆಶಯಗಳು ಈಡೇರುವುದಿಲ್ಲ. ಅವರ ಗುಣ, ಆದರ್ಶ ಹಾಗೂ ವಿಚಾರಧಾರೆಗಳು ಸಮಾಜದಲ್ಲಿ ನೆಲೆಗೊಳ್ಳಬೇಕು. ಜಯಂತಿ ಮತ್ತು ಚುನಾವಣೆಗಳ ಸಂದರ್ಭದಲ್ಲಿ ಮಾತ್ರ ಅವರನ್ನು ಸ್ಮರಿಸದೆ, ಪ್ರತಿನಿತ್ಯ ಅವರ ವಚನಗಳ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಯುವಜನರಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವುದು ಅಗತ್ಯ. ಮಕ್ಕಳಲ್ಲಿ ಸಹಜವಾಗಿ ಮೂಡುವ ಕುತೂಹಲವನ್ನು ಪ್ರೋತ್ಸಾ ಹಿಸಬೇಕು. ವಿದ್ಯಾರ್ಥಿಗಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಬೆಳೆಸುವ ಜವಾಬ್ದಾರಿ ಪೋಷಕರು ಹಾಗೂ ಸರ್ಕಾರದ ಮೇಲಿದೆ. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವುದು ಸರಕಾರದ ಕರ್ತವ್ಯವಾಗಿದ್ದು, ಅದನ್ನು ಮುಂದುವರೆಸುತ್ತಿದೆ ಎಂದರು.

ಅಂಬಿಗರ ಚೌಡಯ್ಯನವರ ಇತಿಹಾಸ ಹಾಗೂ ಡಾ.ಬಿ.ಆರ್. ಅಂಬೇಡ್ಕರ್ ಅವರ ಹೋರಾಟಗಳನ್ನು ಯುವಜನರು ತಿಳಿದುಕೊಳ್ಳಬೇಕು. ಯಾವುದೇ ಸಮುದಾಯವನ್ನು ಕಡೆಗಣಿಸದೆ ಎಲ್ಲರೂ ಸಮಾಜದ ಮುಖ್ಯವಾಹಿನಿಗೆ ಬರಲು ಸಂವಿಧಾನದ ಮೂಲಕ ಅಂಬೇಡ್ಕರ್ ಅವರು ಅವಕಾಶ ಕಲ್ಪಿಸಿದ್ದಾರೆ ಎಂದು ಹೇಳಿದರು.

ತಮಗೆ ಹಾರ-ತುರಾಯಿಗಳ ಬದಲಿಗೆ ಪುಸ್ತಕಗಳನ್ನು ನೀಡುವಂತೆ ಮನವಿ ಮಾಡಿದ ಅವರು, ಪ್ರತಿ ತಿಂಗಳು ಸುಮಾರು ಎರಡು ಸಾವಿರ ಪುಸ್ತಕಗಳು ತಮ್ಮ ಬಳಿ ಬರುತ್ತವೆ. ಅವುಗಳನ್ನು ಅರಿವು ಕೇಂದ್ರಗಳಿಗೆ ಒದಗಿಸಲಾಗುವುದು ಎಂದರು.

ಅಂಬೇಡ್ಕರ್ ಹಾಗೂ ಅಂಬಿಗರ ಚೌಡಯ್ಯನವರು ವ್ಯಕ್ತಿಪೂಜೆಯನ್ನು ವಿರೋಧಿಸಿದ್ದರು. ಭಕ್ತಿ ಮತ್ತು ಗೌರವ ಇರಬೇಕಾದದ್ದು ತತ್ವ ಹಾಗೂ ಆದರ್ಶಗಳ ಮೇಲೆಯೇ ಹೊರತು ವ್ಯಕ್ತಿಗಳ ಮೇಲಲ್ಲ. ಸಾರ್ವಜನಿಕ ಜೀವನದಲ್ಲಿ ಮಹನೀಯರ ತತ್ವಗಳನ್ನು ಅಳವಡಿಸಿಕೊಂಡಾಗ ಮಾತ್ರ ಜನರ ವಿಶ್ವಾಸ ಗಳಿಸಲು ಸಾಧ್ಯ. ಸಮಾಜದ ಪ್ರಗತಿಗಾಗಿ ಹಿರಿಯರು ತೋರಿದ ಮಾರ್ಗದಲ್ಲಿ ನಡೆದು, ಅವರ ಆದರ್ಶಗಳನ್ನು ನಿತ್ಯ ಜೀವನದಲ್ಲಿ ಪಾಲಿಸಬೇಕು ಎಂದು ಕರೆ ನೀಡಿದರು.

ಹಾವೇರಿ ಜಿಲ್ಲೆಯ ನರಸೀಪುರದ ಶಾಂತ ಭೀಷ್ಮ ಚೌಡಯ್ಯ ಮಹಾಸ್ವಾಮಿಗಳು ಮಾತನಾಡಿ, ಕೋಲಿ ಸಮುದಾಯದ ಅಭಿವೃದ್ಧಿಗೆ ಮಲ್ಲಿಕಾರ್ಜುನ ಖರ್ಗೆ ಹಾಗೂ ಪ್ರಿಯಾಂಕ್ ಖರ್ಗೆ ಅವರ ಕೊಡುಗೆ ಅಪಾರವಾಗಿದೆ. ತುಳಿತಕ್ಕೊಳಗಾದ ಸಮುದಾಯವನ್ನು ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಖರ್ಗೆ ಕುಟುಂಬದ ಶ್ರಮ ಮಹತ್ವದ್ದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಿಜಶರಣ ಅಂಬಿಗರ ಚೌಡಯ್ಯ, ಮಾತಾ ಮಣಿಕೇಶ್ವರಿ ಹಾಗೂ ಹೋರಾಟಗಾರ ದಿವಂಗತ ವಿಠ್ಠಲ ಹೇರೂರ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಲಾಯಿತು. ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡು, ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ನೂತನ ಗುರುತಿನ ಚೀಟಿಗಳನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ, ಶಾಸಕ ಎಂ.ವೈ. ಪಾಟೀಲ್, ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಜೆಸ್ಕಾಂ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ, ಮಾಲಾ ಬಿ. ನಾರಾಯಣರಾವ್, ಎಂ. ಶ್ರೀನಿವಾಸ, ಮಲ್ಲಿಕಾರ್ಜುನ ಮುಕ್ಕಾ, ಆನಂದ ರಟಕಲ್, ಸಂಘದ ಜಿಲ್ಲಾಧ್ಯಕ್ಷ ನೀಲಕಂಠ ಜಮಾದಾರ್ ಸಿದ್ದು ಬಾನರ್ ನಾಮದೇವ ಕಡಕೋಳ, ಧರ್ಮರಾಜ ಜವಳಿ, ಅನಿಲ್ ಜಮಾದಾರ್ ಸಿದ್ದಣ್ಣ ಮುಕರಂಬಿ, ರಾಜೇಂದ್ರ ಝಳಕಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಜೀವನಜ್ಯೋತಿ ಶಿಕ್ಷಣ ಸಂಸ್ಥೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ಆಚರಣೆ

ಕಲಬುರಗಿ :

ಆಳಂದ ಪಟ್ಟಣದ ಜೀವನಜ್ಯೋತಿ ಶಿಕ್ಷಣ ಮತ್ತು ಕಲ್ಯಾಣ ಸಂಸ್ಥೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರು ಹಾಗೂ ಮಾಜಿ ಶಾಸಕ ಸುಭಾಷ್ ಆರ್. ಗುತ್ತೇದಾರ ಅವರು ಧ್ವಜಾರೋಹಣ ನೆರವೇರಿಸಿ, ಕನ್ನಡ ನಾಡು, ನುಡಿ, ಸಂಸ್ಕೃತಿ ಮತ್ತು ಪರಂಪರೆಯ ಮಹತ್ವವನ್ನು ಸಾರಿದರು.

ಕನ್ನಡ ಭಾಷೆ ನಮ್ಮ ನಾಡಿನ ಅಸ್ಮಿತೆ ಹಾಗೂ ಸ್ವಾಭಿಮಾನದ ಸಂಕೇತವಾಗಿದೆ. ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗನ ಮೇಲಿದೆ. ವಿಶೇಷವಾಗಿ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆಯ ಬಗ್ಗೆ ಅಭಿಮಾನ, ಗೌರವ ಮತ್ತು ಪ್ರೀತಿಯನ್ನು ಬೆಳೆಸಬೇಕು. ಕನ್ನಡದ ನೆಲ, ಜಲ, ಭಾಷೆ ಹಾಗೂ ಸಂಸ್ಕೃತಿಯ ಸಂರಕ್ಷಣೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿಕೆಜಿ ಪದವಿ ಕಾಲೇಜಿನ ಪ್ರಾಚಾರ್ಯೆ ಕಲ್ಯಾಣಿ ಸಾವಳಗಿ, ಪಿಯು ಕಾಲೇಜಿನ ಪ್ರಾಚಾರ್ಯ ಡಾ. ಅಪ್ಪಾಸಾಬ ಬಿರಾದಾರ, ಬಿ.ಎಡ್. ಕಾಲೇಜಿನ ಪ್ರಾಚಾರ್ಯ ಡಾ. ಅಶೋಕರೆಡ್ಡಿ ಹಾಗೂ ಎಸ್‌ಆರ್‌ಜಿ ಆಂಗ್ಲ ಮಾಧ್ಯಮ ಶಾಲೆಯ ಪ್ರಾಚಾರ್ಯೆ ಜ್ಯೋತಿ ವಿಶಾಖ್ ಸೇರಿದಂತೆ ಸಂಸ್ಥೆಯ ವಿವಿಧ ಶಿಕ್ಷಣ ವಿಭಾಗಗಳ ಮುಖ್ಯಸ್ಥರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

ಕನ್ನಡ ರಾಜ್ಯೋತ್ಸವದ ಅಂಗವಾಗಿ ಕನ್ನಡ ನಾಡು-ನುಡಿಯ ಮಹತ್ವವನ್ನು ಸ್ಮರಿಸಿ, ಕನ್ನಡದ ಗೌರವ ಮತ್ತು ಹಿರಿಮೆಯನ್ನು ಎತ್ತಿಹಿಡಿಯುವ ಸಂಕಲ್ಪ ಕೈಗೊಳ್ಳಲಾಯಿತು.

ಕಬ್ಬಿಗೆ 5,500 ರೂ. ದರ ನಿಗದಿ, ಭೀಮಾ ನದಿಗೆ ನೀರು ಹರಿಸುವಂತೆ ರೈತರ ಧರಣಿ



ಚಡಚಣ

ಪ್ರತಿ ಟನ್ ಕಬ್ಬಿಗೆ 5,500 ರೂ. ದರ ನಿಗದಿಪಡಿಸಬೇಕು, ಭೀಮಾ ನದಿಗೆ ನೀರು ಹರಿಸಬೇಕು ಹಾಗೂ ಬರದಿಂದ ಸಂಕಷ್ಟಕ್ಕೀಡಾಗಿರುವ ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿ ರೈತರು ಝಳಕಿ ಕ್ರಾಸ್‌ನಲ್ಲಿ ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ರೈತೋದಯ ಹಸಿರುಸೇನೆಯ ರಾಜ್ಯ ಉಪಾಧ್ಯಕ್ಷ ನಾಗನಾಥಗೌಡ ಬಿರಾದಾರ ಮಾತನಾಡಿ, ಪ್ರಸಕ್ತ ವರ್ಷ ರಸಗೊಬ್ಬರ ಸೇರಿದಂತೆ ಕೃಷಿಗೆ ಅಗತ್ಯವಾದ ವಿವಿಧ ಪರಿಕರಗಳ ಬೆಲೆ ಗಗನಕ್ಕೇರಿದೆ. ಕೃಷಿ ವೆಚ್ಚ ನಿರಂತರವಾಗಿ ಹೆಚ್ಚುತ್ತಿದ್ದರೂ ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಬೆಲೆ ದೊರೆಯುತ್ತಿಲ್ಲ. ಆದ್ದರಿಂದ ಪ್ರಸಕ್ತ ಹಂಗಾಮಿನಲ್ಲಿ ಪ್ರತಿ ಟನ್ ಕಬ್ಬಿಗೆ 5,500 ರೂ. ದರ ನಿಗದಿಪಡಿಸಬೇಕು ಎಂದು ಒತ್ತಾಯಿಸಿದರು.

ಭೀಮಾ ನದಿಗೆ ನೀರು ಹರಿಸಿ ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು. ನದಿಗೆ ಕೇವಲ 5,000 ಕ್ಯೂಸೆಕ್ ನೀರು ಹರಿಸಲಾಗಿದ್ದು, ಅದು ಪಂಢರಪುರದವರೆಗೆ ತಲುಪಿದೆ. ಆದರೆ ಕರ್ನಾಟಕದ ಧೂಳಖೇಡ ಭಾಗದ ಜನರಿಗೆ ನೀರು ನಿರೀಕ್ಷಿತ ಪ್ರಮಾಣದಲ್ಲಿ ನೀರು ದೊರೆಯುತ್ತಿಲ್ಲ. ಆದ್ದರಿಂದ ಗಡಿ ಭಾಗದ ಗ್ರಾಮಗಳಿಗೆ ನೀರು ತಲುಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರೈತ ಮುಖಂಡ ಬಿ.ಡಿ. ಪಾಟೀಲ ಮಾತನಾಡಿ, ಜಾನುವಾರುಗಳಿಗೆ ಸಮರ್ಪಕವಾಗಿ ಮೇವು ಮತ್ತು ಕುಡಿಯುವ ನೀರು ಒದಗಿಸಬೇಕು. ಅಗತ್ಯವಿದ್ದಲ್ಲಿ ಗೋಶಾಲೆಗಳನ್ನು ಆರಂಭಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನಾಕಾರರು ಝಳಕಿ ಕ್ರಾಸ್‌ನಲ್ಲಿ ಶಿರಾಡೋಣ -ಲಿಂಗಸೂರ ರಾಜ್ಯ ಹೆದ್ದಾರಿಯನ್ನು ಸುಮಾರು ಎರಡು ಗಂಟೆಗಳ ಕಾಲ ತಡೆದಿದ್ದರಿಂದ ವಾಹನ ಸಂಚಾರಕ್ಕೆ ಅಡಚಣೆಯಾಯಿತು. ವಿಜಯಪುರ ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರಿಗೆ ಮನವಿ ಸಲ್ಲಿಸಲಾಯಿತು.

ರೈತ ಮುಖಂಡರಾದ ಸಿದ್ದಣ್ಣಗೌಡ ಬಿರಾದಾರ, ಅಭಿನವ ದೇವಾನಂದ ಚವ್ಹಾಣ, ರೇವಣಸಿದ್ದ ಮೇಲಿನಮನಿ, ಅಶೋಕ ಕಾಪಸೆ, ರವಿ ನಾವಿ, ಸುಭಾಷ ಚಟ್ಟರಕಿ, ರಮೇಶ ಕೋಟಿ, ಸಿದ್ದಣ್ಣ ಬಿರಾದಾರ, ರುದ್ರೇಶ ಖೈನೂರ, ಪ್ರವೀಣ ಬಿರಾದಾರ, ಹುಸೇನಸಾಬ ಮುಲ್ಲಾ, ಹಣಮಂತ ರೇವತಗಾಂವ ಪಾಲ್ಗೊಂಡಿದ್ದರು.

ನ. 26ರಂದು ಸಂವಿಧಾನ ರಕ್ಷಣೆಗಾಗಿ ಬೃಹತ್ ಜನಾಂದೋಲನ : ಅಂಬಾದಾಸ್ ಗಾಯಕವಾಡ

ಬೀದರ್ :

ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸುವುದರ ಜತೆಗೆ ಯುವಜನರಲ್ಲಿ ಸಂವಿಧಾನದ ಮಹತ್ವದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ನ. 26ರಂದು ಸಾಯಂಕಾಲ 5 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಸಂವಿಧಾನ ಉಳಿಸಿ, ಪ್ರಜಾಪ್ರಭುತ್ವ ಉಳಿಸಿ ಘೋಷವಾಕ್ಯದಡಿ ಬೃಹತ್ ಜನಾಂದೋಲನ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ದಲಿತ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ಅಂಬಾದಾಸ್ ಗಾಯಕವಾಡ್ ಅವರು ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ದಲಿತ ರಕ್ಷಣಾ ವೇದಿಕೆ ಹಾಗೂ ವಿವಿಧ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಶನಿವಾರ



ಆಯೋಜಿಸಿದ್ದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸಂವಿಧಾನ ಅಂಗೀಕಾರಗೊಂಡು 77 ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ಸಂವಿಧಾನ ದಿನಾಚರಣೆಯನ್ನು ಬೃಹತ್ ಜನಾಂದೋಲನದ ಮೂಲಕ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ. 2008ರಿಂದ ಕರ್ನಾಟಕ ದಲಿತ ರಕ್ಷಣಾ ವೇದಿಕೆಯು ನಿರಂತರವಾಗಿ ಸಂವಿಧಾನ ದಿನಾಚರಣೆ ಆಚರಿಸಿಕೊಂಡು ಬರುತ್ತಿದ್ದು, ಈ ಬಾರಿ ಜಿಲ್ಲೆಯ ವಿವಿಧ ದಲಿತ ಸಂಘಟನೆಗಳನ್ನು ಒಂದೇ ವೇದಿಕೆಯಡಿ ಒಗ್ಗೂಡಿಸಿ ಸುಮಾರು 10 ಸಾವಿರ ಜನರನ್ನು ಸೇರಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಸಂವಿಧಾನ ಸಂರಕ್ಷಣಾ ಸಮಿತಿಯ ಮಹಾ ಪ್ರಧಾನ ಕಾರ್ಯದರ್ಶಿ ಅನಿಲಕುಮಾರ್ ಬೆಲ್ದಾರ್ ಅವರು ಮಾತನಾಡಿ, ದೇಶದಲ್ಲಿ ಕೆಲವು ಜಾತೀಯವಾದಿ ಹಾಗೂ ಕೋಮುವಾದಿ ಶಕ್ತಿಗಳು ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ದುರ್ಬಲಗೊಳಿಸಲು ಪ್ರಯತ್ನಿಸುತ್ತಿವೆ.

ಜನಸಾಮಾನ್ಯರ ಹಕ್ಕುಗಳು ಹಾಗೂ ಪತ್ರಿಕಾ ಸ್ವಾತಂತ್ರ್ಯದ ಬಗ್ಗೆಯೂ ಆತಂಕಕಾರಿ ಬೆಳವಣಿಗೆಗಳು ನಡೆಯುತ್ತಿವೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಸಮಾವೇಶದಲ್ಲಿ ಸಿಜಿಪಿ ಸಂಸ್ಥಾಪಕ ಅಭಿಜಿತ್ ದೀಪ್ಕೆ, ನೇಹಾ ಬೋರಾ, ನೇಹಾಸಿಂಗ್ ರಾಥೋಡ್ ಸೇರಿದಂತೆ ರಾಷ್ಟ್ರಮಟ್ಟದ ಹೋರಾಟಗಾರರು ಹಾಗೂ ಚಿಂತಕರು ಭಾಗವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರಿಂದ ಕಾರ್ಯಕ್ರಮ ಉದ್ಘಾಟಿಸಲು ಉದ್ದೇಶಿಸಲಾಗಿದೆ. ಕರ್ನಾಟಕ ದಲಿತ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ಸೂರ್ಯವಂಶಿ ವೆಂಕಟೇಶ್, ಗೌರವಾಧ್ಯಕ್ಷ ದೇವೇಂದ್ರ ರಾಮಚಂದ್ರ ಸೂರಿ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು, ಜನಪ್ರತಿನಿಧಿಗಳು, ಸಾಹಿತಿಗಳು ಹಾಗೂ ಪ್ರಗತಿಪರ ಚಿಂತಕರನ್ನು ಆಹ್ವಾನಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಹುಮನಾಬಾದ್ ಮಾಜಿ ತಾ.ಪಂ ಅಧ್ಯಕ್ಷ ರಮೇಶ ಡಾಕುಳಗಿ ಮಾತನಾಡಿ, ಮಾಜಿ ನಗರ ಸಭೆ ಸದಸ್ಯ ಬಾಬುರಾವ್ ಪಾಸ್ವಾನ್, ಪ್ರದೀಪ ನಾಟೇಕರ್ ಶಿವಕುಮಾರ್ ನೀಲಿಕಟ್ಟಿ, ರಘುನಾಥ್ ಗಾಯಕ್ವಾಡ್, ಮುಕೇಶ್ ರಾಯ್, ಸುನಿಲ್ ಸಂಗಮ್, ಪ್ರಸನ್ನ ಡಾಂಗೆ, ಜನಾರ್ಧನ್ ದೀನೆ, ಅವಿನಾಶ್ ದೀನೆ, ಪುಟ್ಟರಾಜ್ ದೀನೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಹಾಲು ದರ ಏರಿಕೆ ಅನಿವಾರ್ಯವೆ?

ನಂದಿನಿ ಹಾಲು ಮತ್ತು ಮೊಸರು ತುಟ್ಟಿಯಾಗಿದೆ. ಹಾಲಿನ ದರ ಲೀಟರ್‌ಗೆ 8 ರೂ. ಏರಿಕೆಯಾಗಿದ್ದರೆ, ಮೊಸರು ದರವನ್ನು ಲೀಟರ್‌ಗೆ 14 ರೂ. ಮತ್ತು ಅರ್ಧ ಲೀಟರ್‌ಗೆ 6 ರೂ. ಹೆಚ್ಚಿಸಲಾಗಿದೆ. ನವೆಂಬರ್1ರಿಂದಲೇ ಈ ಹೊಸ ದರ ಜಾರಿಗೆ ಬಂದಿದೆ. ಒಮ್ಮೆಲೆ ಗ್ರಾಹಕರ ಮೇಲೆ ಬಿದ್ದ ಹೊರೆ ಕಣ್ಣಿಗೆ ಹೊಡೆದು ಕಾಣಿಸುವಷ್ಟಿದೆ. ಆದರೆ, ಹೆಚ್ಚಳದ ದೊಡ್ಡ ಪಾಲು ರೈತರಿಗೆ ಹೋಗುತ್ತದೆ ಎಂಬುದು ರಾಜ್ಯ ಸರಕಾರದ ಸಮರ್ಥನೆ. ಯಾರದೋ ಪ್ರತಿಷ್ಠೆ, ಅವಿವೇಕ ಮತ್ತು ದುರಹಂಕಾರದಿಂದ ತಲೆದೋರಿರುವ ಯುದ್ಧ ಮತ್ತು ತಮ್ಮ ವೈಫಲ್ಯ ಮರೆಮಾಚಲು ಆಡಳಿತಾರೂಢರು ನಡೆಸುವ ಕಸರತ್ತಿನ ಪರಿಣಾಮಗಳಿಗೆ ಜನರು ಬೆಲೆ ತೆರಬೇಕಾಗಿದ್ದರೆ, ನಮ್ಮದೇ ರೈತರಿಗಾಗಿ ಈ ಹೊರೆ ಹೊರುವುದು ಹೊಣೆ ಎಂದು ಒಪ್ಪಬಹುದು. ಆದರೂ, ಮೊಸರಿನ ದರದಲ್ಲಿ ಇಷ್ಟೊಂದು ಹೆಚ್ಚಳ ಎಷ್ಟು ಸಮರ್ಥನೀಯ ಎಂಬ ಪ್ರಶ್ನೆಯಿದೆ.

ದರ ಹೆಚ್ಚಳವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ. ಕಡಿಮೆ ಮಳೆಯಿಂದಾಗಿ ಬರಗಾಲದಂತಹ ವಾತಾವರಣವಿರುವುದು, ಹಸಿಮೇವು ಮತ್ತು ನೀರಿನ ಅಭಾವ, ಜಾನುವಾರುಗಳ ನಿರ್ವಹಣೆ, ಔಷಧ ಹಾಗೂ ಮೇವಿನ ಖರ್ಚಿನಲ್ಲಿ ಗಣನೀಯ ಏರಿಕೆ, ಹಾಲಿನ ಉತ್ಪಾದನೆ ಕುಸಿತ -ಇವೆಲ್ಲವನ್ನೂ ಅವರು ಕಾರಣವಾಗಿ ಉಲ್ಲೇಖಿಸಿದ್ದಾರೆ. ರೈತರು ಹಾಲನ್ನು ಖಾಸಗಿ ಡೇರಿಗಳಿಗೆ ಮಾರಾಟ ಮಾಡುವುದನ್ನು ತಪ್ಪಿಸಲು ಮತ್ತು ಹೈನುಗಾರರನ್ನು ಉಳಿಸಿಕೊಳ್ಳಲು ದರ ಹೆಚ್ಚಳ ಅನಿವಾರ್ಯವಾಗಿತ್ತು. ಲೀಟರ್‌ಗೆ ಕನಿಷ್ಠ 10 ರಿಂದ 12 ರೂ. ಹೆಚ್ಚಿಸುವಂತೆ ರೈತರು ಮನವಿ ಮಾಡಿದ್ದರೂ, ಜನರ ಮೇಲೆ ಹೊರೆಯಾಗುವುದನ್ನು ಗಮನದಲ್ಲಿಟ್ಟುಕೊಂಡು 8 ರೂ. ಮಾತ್ರ ಏರಿಕೆ ಮಾಡಲಾಗಿದೆ. ದರ ಹೆಚ್ಚಳದ ನಂತರವೂ ಇತರ ನೆರೆರಾಜ್ಯಗಳಿಗೆ ಹೋಲಿಸಿದರೆ ನಂದಿನಿ ಹಾಲಿನ ದರ ಕಡಿಮೆಯೇ ಇದೆ ಎಂದಿದ್ದಾರೆ. ಏರಿಕೆ ಮಾಡಿದ ಹಣದಲ್ಲಿ ಲೀಟರ್‌ಗೆ 7 ರೂ. ನೇರವಾಗಿ ರೈತರಿಗೆ ತಲುಪಲಿದ್ದು, ಉಳಿದ 1 ರೂ. ಮಾತ್ರ ಒಕ್ಕೂಟಗಳ ನಿರ್ವಹಣೆಗೆ ಬಳಕೆಯಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಈ ಲೆಕ್ಕದಲ್ಲಿ, ರೈತರಿಗೆ ಸಿಗುವ ದರ ಲೀಟರ್‌ಗೆ 35ರಿಂದ 42 ರೂ.ಗೆ ಏರಿಕೆಯಾಗಲಿದೆ. ಸರಕಾರ ನೀಡುವ 5 ರೂ. ಪ್ರೋತ್ಸಾಹಧನ ಸೇರಿ ರೈತರಿಗೆ ಪ್ರತೀ ಲೀಟರ್ ಹಾಲಿಗೆ 47 ರೂ. ಸಿಗಲಿದೆ. ಈ ದರ ಹೆಚ್ಚಳದಿಂದ ಗ್ರಾಮೀಣ ಹೈನುಗಾರರ ಕುಟುಂಬಗಳಿಗೆ ವಾರ್ಷಿಕ ಅಂದಾಜು 1,850 ಕೋಟಿ ರೂ.ಗಳಿಂದ 2,100 ಕೋಟಿ ರೂ.ವರೆಗೆ ಆದಾಯ ಸಿಗುವ ನಿರೀಕ್ಷೆಯಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

ಕರ್ನಾಟಕದ ಹಾಲು ಮಾರುಕಟ್ಟೆಯಲ್ಲಿ ನಂದಿನಿ ಹಾಲು ಸಿಂಹಪಾಲನ್ನು ಹೊಂದಿದೆ ಎಂಬುದು ನಿಜವಾದರೂ, ಇತರ ಖಾಸಗಿ ಬ್ರಾಂಡ್‌ಗಳು ನಂದಿನಿ ಹಾಲಿನ ದರಕ್ಕಿಂತ ಹೆಚ್ಚಿನ ಬೆಲೆ ಮೂಲಕ ಲಾಭ ಮಾಡಿಕೊಳ್ಳುತ್ತಿರುವುದು ಕೂಡ ವಾಸ್ತವ. ಬೆಂಗಳೂರು ಹಾಗೂ ಉತ್ತರ ಕರ್ನಾಟಕದಲ್ಲಿ ಹೆಚ್ಚು ಮಾರಾಟವಾಗುವ ಅಮುಲ್, ದಕ್ಷಿಣ ಕರ್ನಾಟಕದಲ್ಲಿ ಹೆಚ್ಚು ಪರಿಚಿತ ಹ್ಯಾಟ್ಸನ್ ಮತ್ತು ಆರೋಕ್ಯ ಅಲ್ಲದೆ ಹೆರಿಟೇಜ್, ದೊಡ್ಲಾ, ತಿರುಮಲ, ಜರ್ಸಿ ಇತ್ಯಾದಿ ಖಾಸಗಿ ಬ್ರಾಂಡ್‌ಗಳ ಹಾಲಿನ ದರ ಯಾವಾಗಲೂ ನಂದಿನಿ ಹಾಲಿಗಿಂತ ಕನಿಷ್ಠ 2ರಿಂದ 6 ರೂ., ಕೆಲವೊಮ್ಮೆ 10-12 ರೂ. ಹೆಚ್ಚೇ ಇರುತ್ತದೆ. ಫ್ಯಾಟ್ ಅಂಶ ಹೆಚ್ಚಿರುವ ಹಾಲಿನ ದರದಲ್ಲಂತೂ ಈ ಅಂತರ ಹೆಚ್ಚು. ಹೊರ ರಾಜ್ಯಗಳ ಖಾಸಗಿಯವರು ದೋಚಬಹುದಾದರೆ, ನಮ್ಮದೇ ರೈತರಿಗೆ ಲಾಭವೊದಗಿಸುವ ದರ ಏರಿಕೆಯನ್ನು ದೋಖಾ ಎಂದು ಬಿಜೆಪಿ ಗದ್ದಲವೆಬ್ಬಿಸುವುದರಲ್ಲಿ ಅರ್ಥವಿಲ್ಲ ಎಂದೂ ಅನ್ನಿಸುತ್ತದೆ.

ರಾಜ್ಯದಲ್ಲಿ ಅಕ್ಕಿ ಬೆಲೆ ಭಾರೀ ಪ್ರಮಾಣದಲ್ಲಿ ಏರಿಕೆಯಾಗುತ್ತಿದ್ದು, ಕಳೆದ ನಾಲ್ಕು ತಿಂಗಳುಗಳಲ್ಲಿ ಶೇ.30ರಷ್ಟು ಹೆಚ್ಚಳವಾಗಿದೆ. ಬೆಲೆ ಏರಿಕೆಯಾಗಿದ್ದರೂ ಅದರ ಸಂಪೂರ್ಣ ಲಾಭ ರೈತರಿಗೆ ಸಿಕ್ಕಿಲ್ಲ. ಹಾಲಿನ ದರ ಹೆಚ್ಚಳದ ಫಲ ನೇರವಾಗಿ ರೈತರಿಗೆ ಹೋಗಲಿದೆ ಎಂದಾದರೆ, ಅದು ಈ ದುಷ್ಕಾಲದಲ್ಲಿ ಅವರಿಗೆ ದೊಡ್ಡ ಭರವಸೆಯೆಂಬುದನ್ನು ಅಲ್ಲಗಳೆಯಲಾಗದು. ಅಕ್ಕಿ ಮಾತ್ರವಲ್ಲ, ದೇಶದಲ್ಲಿ ಚಿಲ್ಲರೆ ಹಣದುಬ್ಬರದಿಂದಾಗಿ ಆಹಾರ ಪದಾರ್ಥಗಳ ಬೆಲೆಗಳು ಏರುತ್ತಲೇ ಇವೆ. ಈರುಳ್ಳಿ, ಅಡುಗೆ ಎಣ್ಣೆ, ಸಕ್ಕರೆ, ಬೆಲ್ಲ, ಬೇಳೆಕಾಳುಗಳು, ತರಕಾರಿ ಸೇರಿದಂತೆ ಬಹುತೇಕ ದಿನಬಳಕೆ ವಸ್ತುಗಳ ಬೆಲೆ ಗಣನೀಯವಾಗಿ ಹೆಚ್ಚಾಗಿದೆ. ಈ ಸ್ಥಿತಿ ಈಗಾಗಲೇ ಜನಸಾಮಾನ್ಯರ ಅಡುಗೆಮನೆಯೊಳಗೆ ಬಿಸಿ ಹೆಚ್ಚಿಸಿರುವಾಗ, ಜನರ ಬಗ್ಗೆ ತುಂಬ ಕಾಳಜಿ ಹೊಂದಿರುವುದಾಗಿ ಬಿಂಬಿಸಿಕೊಳ್ಳುವ ಬಿಜೆಪಿ ತುಟಿಪಿಟಕ್ಕೆನ್ನುತ್ತಿಲ್ಲ. ದೀಪಾವಳಿ ಹಬ್ಬಕ್ಕೂ ಮುನ್ನ ವಾಣಿಜ್ಯ ಎಲ್ಪಿಜಿ ಸಿಲಿಂಡರ್ ಬೆಲೆ ಮತ್ತೆ ಹೆಚ್ಚಳವಾಗಿದ್ದು, ಇದು ಏರಿಕೆಯ ಸತತ ಮೂರನೇ ತಿಂಗಳು. ನಮ್ಮ ರೈತರು ಉತ್ಪಾದಿಸುವ ಹಾಲಿನ ದರ ಮೂರೂವರೆ ವರ್ಷಗಳಲ್ಲಿ ನಾಲ್ಕೈದು ಸಲ ಏರಿದೆ ಎಂದು ಗರಂ ಆಗುವ ಬಿಜೆಪಿಯ ರಾಜ್ಯ ನಾಯಕರು, ಇದರ ಬಗ್ಗೆ ಮಾತ್ರ ಏನೂ ಗೊತ್ತಿಲ್ಲದವರಂತೆ ಇರುತ್ತಾರೆ. ಅಲ್ಲದೆ, ರೈತರಿಗೆ ಅನುಕೂಲವಾಗುವುದರಿಂದ ಹಾಲಿನ ದರ ಏರಿಕೆ ಸ್ವಾಗತಾರ್ಹ ಎನ್ನುವವರೇ, ಇದರ ಹೊರೆಯನ್ನು ಗ್ರಾಹಕರ ಮೇಲೆ ಹೇರದೆ, ಸರಕಾರವೇ ಹೊರಬೇಕಿತ್ತು ಎಂದೂ ಹೇಳುತ್ತಾರೆ. ಕಾಂಗ್ರೆಸ್ ಸರಕಾರದ ಗ್ಯಾರಂಟಿ ಯೋಜನೆಯಿಂದ ರಾಜ್ಯದ ಬೊಕ್ಕಸ ಖಾಲಿಯಾಗಿದೆ ಎನ್ನುವವರ ದ್ವಂದ್ವ ಇದು. ಕಬ್ಬು ಬೆಳೆಗಾರರು ಪ್ರತಿಭಟಿಸಿದಾಗ ಈ ಸರಕಾರಕ್ಕೆ ರೈತರ ಬಗ್ಗೆ ಕಾಳಜಿಯಿಲ್ಲ ಎನ್ನುವುದು, ರೈತರ ಪರ ನಿಲುವು ತೆಗೆದುಕೊಂಡಾಗ ಜನರ ಬಗ್ಗೆ ಕಾಳಜಿಯಿಲ್ಲ ಎನ್ನುವುದು ಬರೀ ಗೋಣಗಾಟದಂತಿದೆ.

ಅದೇನೇ ಇದ್ದರೂ, ಸಾಮಾನ್ಯ ಗ್ರಾಹಕರ ದೃಷ್ಟಿಯಿಂದ ಸರಕಾರ ಇನ್ನೂ ಸ್ವಲ್ಪ ದಾಕ್ಷಿಣ್ಯ ತೋರಿಸಬಹುದಿತ್ತು. ಹಾಲಿಗೆ ಹೋಲಿಸಿದರೆ ಮೊಸರಿನಲ್ಲಿ ಕೊಬ್ಬಿನಾಂಶ ಹಾಗೂ ಸಾಲಿಡ್ಸ್ ಪ್ರಮಾಣ ಕಾಯ್ದುಕೊಳ್ಳಬೇಕಾಗುತ್ತದೆ. ಹಾಗಾಗಿ, ಖಾಸಗಿಯವರ ಪೈಪೋಟಿ ಎದುರಿಸಲು ಮತ್ತು ಒಕ್ಕೂಟಗಳ ನಷ್ಟ ಸರಿದೂಗಿಸಲು ಮೊಸರಿನ ದರ ಹೆಚ್ಚಿಸಿದ್ದರೂ, ಅಲ್ಲೂ ಕೊಂಚ ತಗಿಸಬಹುದಿತ್ತು. ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಇದು ಖಂಡಿತವಾಗಿಯೂ ಹೆಚ್ಚುವರಿ ಆರ್ಥಿಕ ಹೊರೆ. ಆದರೆ, ಹೈನುಗಾರರ ಹಿತದೃಷ್ಟಿಯಿಂದ ನೋಡಿದರೆ, ಅವರಿಗಾಗಿ ನಮ್ಮ ಪಾಲೂ ಇರಲಿ ಎಂದುಕೊಂಡರೆ ಅದು ಶುದ್ಧ ಸಹಕಾರ. ಆಗ ಹಾಲಿಗೆ ಹುಳಿ ಹಿಂಡುವ, ಮೊಸರಲ್ಲಿ ಕಲ್ಲು ಹುಡುಕುವ ರಾಜಕೀಯ ಇರುವುದಿಲ್ಲ.

ರಾಮಲೀಲಾ ಮೈದಾನದಲ್ಲಿ ವಿಪಕ್ಷಗಳ ಬಲಪ್ರದರ್ಶನ; ಬೀದಿ ಹೋರಾಟ ಬೇರುಮಟ್ಟದ ಜನಾಂದೋಲನವಾಗಬೇಕು...

ನವೆಂಬರ್ 1ರಂದು ದೆಹಲಿಯ ಐತಿಹಾಸಿಕ ರಾಮಲೀಲಾ ಮೈದಾನದಲ್ಲಿ ನಡೆದ ಪ್ರತಿಭಟನಾ ಸಮಾವೇಶವು ಭಾರತೀಯ ರಾಜಕಾರಣದಲ್ಲಿ ಮತ್ತೊಂದು ಮಹತ್ವದ ರಾಜಕೀಯ ಮೈಲಿಗಲ್ಲಾಗಿ ದಾಖಲಾಗಿದೆ. ಚುನಾವಣಾ ಅಕ್ರಮ, ಎಸ್‌ಐಆರ್ ಷಡ್ಯಂತ್ರದ ವಿರುದ್ಧ ಮತ್ತು ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಕಾಂಗ್ರೆಸ್ ನೇತೃತ್ವದ ಇಂಡಿಯಾ ಒಕ್ಕೂಟವು ಮತ ಉಳಿಸಿ, ದೇಶ ಉಳಿಸಿ ಘೋಷದೊಂದಿಗೆ ಬೃಹತ್ ಹೋರಾಟ ದಾಖಲಿಸಿದೆ. ಯಶಸ್ವಿಗೊಳಿಸಿದೆ.

ದೇಶದ ವಿವಿಧ ಭಾಗಗಳಿಂದ ಹರಿದುಬಂದ ಜನಸಾಗರ ಮತ್ತು ವಿರೋಧ ಪಕ್ಷಗಳ ಪ್ರಮುಖ ನಾಯಕರ ಉಪಸ್ಥಿತಿಯು ಚುನಾವಣಾ ಆಯೋಗದ ಕಾರ್ಯವೈಖರಿಯ ವಿರುದ್ಧದ ಆಕ್ರೋಶವನ್ನು ರಾಷ್ಟ್ರಮಟ್ಟದಲ್ಲಿ ಮತ್ತೊಮ್ಮೆ ಮುನ್ನೆಲೆಗೆ ತಂದಿದೆ. ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಮಾಜವಾದಿ ಪಕ್ಷದ ನಾಯಕ ಅಖಿಲೇಶ್ ಯಾದವ್, ಟಿಎಂಸಿ ನಾಯಕಿ ಮಮತಾ ಬ್ಯಾನರ್ಜಿ ಸೇರಿದಂತೆ ಅನೇಕ ನಾಯಕರು ಒಂದೇ ವೇದಿಕೆಯಲ್ಲಿ ಕೈಜೋಡಿಸಿರುವುದು ವಿಪಕ್ಷಗಳ ಒಗ್ಗಟ್ಟಿನ ಸಂದೇಶವನ್ನೂ ರವಾನಿಸಿದೆ. ಮಾತ್ರವಲ್ಲದೆ, ಈ ಪ್ರತಿಭಟನೆಯು ಪ್ರಜಾಪ್ರಭುತ್ವ ಮತ್ತು ಸಾಂವಿಧಾನಿಕ ಸಂಸ್ಥೆಗಳ ಸ್ವಾಯತ್ತತೆಯನ್ನು ಕಾಪಾಡುವ ನಿಟ್ಟಿನಲ್ಲಿ ನಿರ್ಣಾಯಕ ಹೆಜ್ಜೆಯೂ ಆಗಿದೆ.

ಆದಾಗ್ಯೂ, ರಾಮಲೀಲಾ ಮೈದಾನದಲ್ಲಿ ನೆರೆದಿದ್ದ ಬೃಹತ್ ಜನಸಮೂಹವನ್ನು ಕಂಡು ತಮ್ಮ ರಾಜಕೀಯ ಹೋರಾಟ ಸಂಪೂರ್ಣ ಯಶಸ್ವಿಯಾಯಿತು ಎಂದು ವಿಪಕ್ಷಗಳು ತೃಪ್ತಿಪಟ್ಟುಕೊಳ್ಳಲಾಗದು. ಬೃಹತ್ ಸಮಾವೇಶಗಳನ್ನು ಆಯೋಜಿಸುವುದು, ಸಾವಿರಾರು ಕಾರ್ಯಕರ್ತರನ್ನು ಕರೆತರುವುದು ಹಾಗೂ ಆಕರ್ಷಕ ಭಾಷಣಗಳ ಮೂಲಕ ಸರ್ಕಾರದ ವೈಫಲ್ಯಗಳನ್ನು ಟೀಕಿಸುವುದು ರಾಜಕೀಯ ಪಕ್ಷಗಳ ಸಂಘಟನಾ ಸಾಮರ್ಥ್ಯವನ್ನು ತೋರುತ್ತದೆ. ಆದರೆ, ಅದರಾಚೆಗೆ, ಜನರ ನಡುವೆ ಶಾಶ್ವತವಾದ ಮತ್ತು ಆಳವಾದ ರಾಜಕೀಯ ಬದಲಾವಣೆಯನ್ನು ತರುವುದಿಲ್ಲ. ಅಂತಹ ಬದಲಾವಣೆ ತರಲು ಮಹತ್ತರವಾದ ಕೆಲಸಗಳಾಗಬೇಕು.

ಭಾರತದ ರಾಜಕಾರಣದಲ್ಲಿ ನಾಯಕರ ಮತ್ತು ಭಾಷಣಕಾರರ ಕೊರತೆಯಿಲ್ಲ. ಆದರೆ, ಹಳ್ಳಿಗಳು, ವಾರ್ಡ್‌ಗಳು, ಬಡಾವಣೆಗಳು ಹಾಗೂ ಮತಗಟ್ಟೆಗಳ ಮಟ್ಟದಲ್ಲಿ ಜನರೊಂದಿಗೆ ನಿರಂತರವಾಗಿ ಕೆಲಸ ಮಾಡುವ ವ್ಯವಸ್ಥಿತ ಸಂಘಟನೆಯ ಕೊರತೆ ವಿಪಕ್ಷಗಳನ್ನು ಕಾಡುತ್ತಿದೆ. ರಾಜಕಾರಣದಲ್ಲಿ ಚುನಾವಣೆಯ ಸಂದರ್ಭದಲ್ಲಿ ಮಾತ್ರ ಮತದಾರರನ್ನು ನೆನಪಿಸಿಕೊಳ್ಳುವ ಸಂಸ್ಕೃತಿ ಬದಲಾಗಬೇಕಾದರೆ, ಕೇವಲ ದೆಹಲಿಯ ವೇದಿಕೆಗಳ ಬಲಪ್ರದರ್ಶನ ಸಾಲದು; ಬದಲಿಗೆ ಪ್ರತಿ ಹಳ್ಳಿಯ ಪ್ರತಿ ಮನೆಯವರೆಗೂ ತಲುಪುವ ಬದ್ಧತೆ ಬೇಕು.



ಜನರ ದೈನಂದಿನ ಸಮಸ್ಯೆಗಳಿಗೆ ಸ್ಪಂದಿಸಿ ಅವರೊಂದಿಗೆ ನಿರಂತರ ಸಂಪರ್ಕದಲ್ಲಿರುವುದು ಅಗತ್ಯವಾದ ರಾಜಕೀಯ ಜವಾಬ್ದಾರಿ. ಇದನ್ನು ವಿಪಕ್ಷಗಳು ಅರಿಯಬೇಕಾದ್ದು ಅತ್ಯಗತ್ಯ.

ವಿಶೇಷವಾಗಿ, ಮೋದಿ-ಶಾ ಕುಮ್ಮಕ್ಕಿನೊಂದಿಗೆ ಎಸ್‌ಐಆರ್ ಪ್ರಕ್ರಿಯೆಯ ಹೆಸರಿನಲ್ಲಿ ನೈಜ ಮತದಾರರ ಹೆಸರುಗಳನ್ನು ಚುನಾವಣಾ ಆಯೋಗ ಅಳಿಸಿಹಾಕಿದೆ. ಲಕ್ಷಾಂತರ ಮತದಾರರು ಮತದ ಹಕ್ಕು ಕಳೆದುಕೊಂಡಿದ್ದಾರೆ. ಇಂತಹ ಗಂಭೀರ ಬಿಕ್ಕಟ್ಟಿನ ಸಮಯದಲ್ಲಿ, ದೆಹಲಿಯ ರಾಮಲೀಲಾ ಮೈದಾನದಲ್ಲಿ ಮಾಡಲಾದ ಶಕ್ತಿ ಪ್ರದರ್ಶನ ಮತ್ತು ಭಾಷಣಗಳು ಸಮಸ್ಯೆಯನ್ನು ಪರಿಹರಿಸುವುದಿಲ್ಲ. ಬದಲಾಗಿ, ಮತಪಟ್ಟಿಯಿಂದ ಅಳಿಸಿಹೋಗಿರುವ ಮತದಾರರ ಮನೆಗೆ ತೆರಳಿ, ದಾಖಲೆಗಳನ್ನು ಪರಿಶೀಲಿಸಿ, ಸಂಬಂಧಪಟ್ಟ ಚುನಾವಣಾ ಅಧಿಕಾರಿಯನ್ನು ಸಂಪರ್ಕಿಸಿ, ಅರ್ಹರ ಹಕ್ಕನ್ನು ಮರುಸ್ಥಾಪಿಸುವವರೆಗೆ ಜೊತೆ ನಿಲ್ಲುವ ಸ್ಥಳೀಯ ಸಂಘಟನಾ ವ್ಯವಸ್ಥೆಯೂ ಬೇಕು. ಕರ್ನಾಟಕ, ಬಿಹಾರ, ಉತ್ತರ ಪ್ರದೇಶದಿಂದ ಹಿಡಿದು ಪಶ್ಚಿಮ ಬಂಗಾಳದವರೆಗಿನ ಪ್ರತಿಯೊಂದು ರಾಜ್ಯದಲ್ಲೂ ಜನಪರ ಮತ್ತು ಕ್ರಿಯಾಶೀಲ ಕಾರ್ಯಪಡೆಯನ್ನು ಕಟ್ಟಬೇಕು. ಆಗ ಮಾತ್ರ ವಿಪಕ್ಷಗಳ ಈ ಬೃಹತ್ ಹೋರಾಟಕ್ಕೆ ನಿಜವಾದ ಅರ್ಥ ಬರುತ್ತದೆ.

ಅಂತೆಯೇ, ಮತದಾರರ ದೂರುಗಳನ್ನು ಸ್ವೀಕರಿಸಿ, ಕಾನೂನುಬದ್ಧವಾಗಿ ಅರ್ಜಿಗಳನ್ನು ಸಲ್ಲಿಸಲು ಸಹಾಯ ಮಾಡುವ ಮತ್ತು ಆಯೋಗದಿಂದ ಕಾಲಮಿತಿಯೊಳಗೆ ಉತ್ತರ ಪಡೆಯುವ ಪಾರದರ್ಶಕ ವ್ಯವಸ್ಥೆಯನ್ನು ಪ್ರತಿ ವಿಧಾನಸಭಾ ಕ್ಷೇತ್ರ ಮಟ್ಟದಲ್ಲಿ ರೂಪಿಸಬೇಕು.

ಇದೆಲ್ಲದರ ಜೊತೆಗೆ, ಜನರ ಬದುಕಿನ ಪ್ರಶ್ನೆಗಳು ಕೇವಲ ಮತದಾನದ ಹಕ್ಕಿಗಷ್ಟೇ ಸೀಮಿತವಾಗಿಲ್ಲ ಎಂಬ ವಾಸ್ತವವನ್ನು ವಿಪಕ್ಷಗಳು ಗಂಭೀರವಾಗಿ ಪರಿಗಣಿಸಬೇಕು. ಬೆಲೆ ಏರಿಕೆ, ನಿರುದ್ಯೋಗ, ಕೃಷಿ ಬಿಕ್ಕಟ್ಟು, ಮಹಿಳೆಯರ ಸುರಕ್ಷತೆ ಹಾಗೂ ಜೀವನೋಪಾಯದ ಬಿಕ್ಕಟ್ಟು ಎದುರಿಸುತ್ತಿರುವ ಜನರ ದಿನನಿತ್ಯದ ಬದುಕಿನ ಸಂಕಷ್ಟಗಳಿಗೂ ಸ್ಪಂದಿಸಬೇಕು. ರೈತರಿಗೆ ನ್ಯಾಯಯುತ ಬೆಲೆ, ಯುವಕರಿಗೆ ಉದ್ಯೋಗಾವಕಾಶಗಳು ಹಾಗೂ ಬಡವರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ರಾಜಕೀಯ ಪಕ್ಷಗಳು ನಿರಂತರವಾಗಿ ಧ್ವನಿ ಎತ್ತಬೇಕು.

ಅಧಿಕಾರದಲ್ಲಿರುವವರನ್ನು ಟೀಕಿಸುವುದಷ್ಟೇ ಅಲ್ಲದೆ, ವಿಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳಲ್ಲೂ ಆಡಳಿತಾತ್ಮಕ ಪಾರದರ್ಶಕತೆ ಮತ್ತು ಜನಪರ ಕಾಳಜಿಯನ್ನು ಪ್ರದರ್ಶಿಸಬೇಕು. ಆದ್ದರಿಂದ, ಎಸ್‌ಐಆರ್ ವಿರೋಧಿ ಹೋರಾಟವನ್ನು ಕೇವಲ ಸಾಂವಿಧಾನಿಕ ಚರ್ಚೆಯ ಮಟ್ಟಕಷ್ಟೇ ಇರಿಸಿಕೊಳ್ಳದೆ, ಅದನ್ನು ಜನಸಾಮಾನ್ಯರ ಬದುಕಿನ ಹಕ್ಕುಗಳ ಹೋರಾಟದೊಂದಿಗೆ ಬೆಸೆಯಬೇಕು.

ಇದೇ ಹೊತ್ತಿನಲ್ಲಿ, ಪ್ರಜಾಪ್ರಭುತ್ವದ ರಕ್ಷಣೆಗಾಗಿ ಧ್ವನಿ ಎತ್ತುವ ವಿರೋಧ ಪಕ್ಷಗಳು ತಮ್ಮದೇ ಪಕ್ಷಗಳ ಆಂತರಿಕ ಸಂಘಟನೆಯಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಎಷ್ಟರ ಮಟ್ಟಿಗೆ ಪಾಲಿಸುತ್ತಿವೆ ಎಂಬ ಆತ್ಮಾವಲೋಕನ ಮಾಡಿಕೊಳ್ಳಬೇಕು. ಸ್ಥಳೀಯ ಘಟಕಗಳಲ್ಲಿ ನಿರ್ಧಾರ ಕೈಗೊಳ್ಳುವ ಸ್ವಾತಂತ್ರ್ಯ, ಯುವಜನರು, ಮಹಿಳೆಯರು ಹಾಗೂ ಅಂಚಿಗೆ ತಳ್ಳಲ್ಪಟ್ಟ ಸಮುದಾಯಗಳಿಗೆ ನಾಯಕತ್ವದಲ್ಲಿ ಹೆಚ್ಚಿನ ಅವಕಾಶ ನೀಡುವುದನ್ನೂ ರೂಢಿಸಿಕೊಳ್ಳಬೇಕು.

ಜನರ ವಿಶ್ವಾಸವನ್ನು ಗಳಿಸುವುದೇ ರಾಜಕೀಯ ಪಕ್ಷಗಳ ಅತಿ ದೊಡ್ಡ ಬಲ. ಆ ಬಲವನ್ನು ಗಟ್ಟಿಗೊಳಿಸಲು ನಾಯಕರು ದೆಹಲಿಯ ಚೌಕಟ್ಟುಗಳನ್ನು ಮೀರಿ ಹಳ್ಳಿಗಳತ್ತ ಹೆಜ್ಜೆಹಾಕಬೇಕು. ಅದಕ್ಕಾಗಿ, ವಿವಿಧ ರಾಜ್ಯಗಳಲ್ಲಿ ವಿಪಕ್ಷಗಳ ನಡುವೆ ಇರುವ ರಾಜಕೀಯ ಪೈಪೋಟಿ ಮತ್ತು ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು, ಪ್ರಜಾಸತ್ತಾತ್ಮಕ ಹಕ್ಕುಗಳ ರಕ್ಷಣೆಯ ಹೋರಾಟದಲ್ಲಿ ನಿರಂತರ ಸಮನ್ವಯವನ್ನು ಸಾಧಿಸಬೇಕು. ದೆಹಲಿಯ ವೇದಿಕೆಯಲ್ಲಿ ಮೊಳಗಿದ ಘೋಷವು ಪ್ರತಿಯೊಂದು ಗ್ರಾಮದ ಮತಗಟ್ಟೆಗಳಲ್ಲಿ ಪ್ರತಿಧ್ವನಿಸಬೇಕು.

ಮಣಿಪುರವನ್ನು ಜನಾಂಗೀಯ ಘರ್ಷಣೆಯ ದಳ್ಳುರಿಗೆ ನೂಕಿ ಕೈ ಚೆಲ್ಲಿರುವ ಮೋಶಾ ಸರ್ಕಾರ!

ಮ್ಯಾನ್ಮಾರ್‌ನೊಂದಿಗೆ ಸುಮಾರು 400 ಕಿಲೋಮೀಟರ್ ಗಡಿ ಹಂಚಿಕೊಳ್ಳುವ ಈಶಾನ್ಯ ಭಾರತದ ಗಡಿ ರಾಜ್ಯ ಮಣಿಪುರದಲ್ಲಿ ಶತಮಾನಗಳಿಂದ ಬೆಳೆದು ಬಂದಿದ್ದ ಸೌಹಾರ್ದತೆಯ ಬೇರುಗಳನ್ನು ಸಂಪೂರ್ಣವಾಗಿ ಕೊಳೆತು ಹೋಗಲು ಕೇಂದ್ರ ಸರ್ಕಾರ ಬಿಟ್ಟಂತಿದೆ. 2023ರಿಂದ ನಡೆಯುತ್ತಿರುವ ಈ ಭೀಕರ ಜನಾಂಗೀಯ ಹಿಂಸಾಚಾರ, ಒಂದಾನೊಂದು ಕಾಲದಲ್ಲಿ ಕಣಿವೆ ಮತ್ತು ಬೆಟ್ಟ ಪ್ರದೇಶಗಳ ನಡುವೆ ಸಾಗುತ್ತಿದ್ದ ಸೂಕ್ಷ್ಮ ಸಾಮಾಜಿಕ ನೆಮ್ಮದಿಯ ನೆಯ್ಗೆಯನ್ನು ಸುಟ್ಟು ಭಸ್ಮ ಮಾಡಿದೆ. ಕೊನೆಯಿಲ್ಲದ ಈ ಕರಾಳ ಅಧ್ಯಾಯವು ಭಾರತೀಯ ಒಕ್ಕೂಟ ವ್ಯವಸ್ಥೆಯ ಅತ್ಯಂತ ಆತಂಕಕಾರಿ ವಿದ್ಯಮಾನವಾಗಿ ಹೊರಹೊಮ್ಮಿದೆ. ಆದರೆ, ಈ ಒಕ್ಕೂಟದ ರಕ್ಷಣೆಯ ಹೊಣೆ ಹೊತ್ತ ಕೇಂದ್ರದ ಮೋದಿ-ಶಾ ಆಡಳಿತ ವ್ಯವಸ್ಥೆಯು ರಾಜ್ಯವನ್ನು ಉರಿಯುವ ದಳ್ಳುರಿಗೆ ತಳ್ಳಿ, ಸಂಪೂರ್ಣವಾಗಿ ಕೈಚೆಲ್ಲಿ ಕುಳಿತಿದೆ.

ಮಾನವ ಕ್ರೌರ್ಯದ ಪರಾಕಾಷ್ಠೆಗೆ ಹಿಡಿದ ಕೈಗನ್ನಡಿಯಂತೆ, ಇಬ್ಬರು ಮಹಿಳೆಯರನ್ನು ಬೆತ್ತಲೆಯಾಗಿ ರಸ್ತೆಯಲ್ಲಿ ಮೆರವಣಿಗೆ ಮಾಡಿದ ಆ ದೃಶ್ಯಗಳು ಜಗತ್ತಿನ ಮನಸ್ಸಾಕ್ಷಿಯನ್ನೇ ಬೆಚ್ಚಿಬೀಳಿಸಿದ್ದವು. ಆದರೆ, ಇಷ್ಟೆಲ್ಲಾ ರಕ್ತಪಾತ, ಆಕ್ರಂದನ ಮುಗಿಲು ಮುಟ್ಟಿದ್ದರೂ ದೇಶದ ಪ್ರಧಾನಿ ನರೇಂದ್ರ ಮೋದಿ ಅವರು ಇದುವರೆಗೂ ಮಣಿಪುರಕ್ಕೆ ಭೇಟಿ ನೀಡದಿರುವುದು ದಿಗ್ಭ್ರಮೆ ಮೂಡಿಸುತ್ತದೆ. ಅವರ ಈ ಮೌನ ಮತ್ತು ನಿರ್ಲಕ್ಷ್ಯ, ಕೇಂದ್ರ ಸರ್ಕಾರದ ಆದ್ಯತೆಗಳು ಎತ್ತತ್ತ ಸಾಗುತ್ತಿವೆ ಎಂಬುದನ್ನು ತೋರಿಸುವುದಲ್ಲದೆ, ನಮ್ಮ ಪ್ರಜಾಪ್ರಭುತ್ವದ ಆಳದ ಬಿರುಕುಗಳನ್ನು ತೆರೆದಿಟ್ಟಿದೆ.

ಯಾವುದೇ ಜವಾಬ್ದಾರಿಯುತ ಆಡಳಿತವಾಗಿದ್ದರೆ ಇದನ್ನು ರಾಷ್ಟ್ರೀಯ ತುರ್ತು ಪರಿಸ್ಥಿತಿ ಎಂದು ಪರಿಗಣಿಸಿ ಯುದ್ಧೋಪಾದಿಯಲ್ಲಿ ಕೆಲಸ ಮಾಡುತ್ತಿತ್ತು. ಆದರೆ, ಮಣಿಪುರವನ್ನು ತನ್ನ ಪಾಡಿಗೆ ತಾನು ನರಳಲು ಬಿಡಲಾಯಿತು. ಕಣಿವೆ ಪ್ರದೇಶದ ಬಹುಸಂಖ್ಯಾತ ಮೈತೈ ಮತ್ತು ಬೆಟ್ಟ ಪ್ರದೇಶಗಳಲ್ಲಿ ವಾಸಿಸುವ ಕುಕಿ-ರ್ಝೋ ಹಾಗೂ ನಾಗಾ ಸಮುದಾಯಗಳ ನಡುವಿನ ಭೂಮಿ ಹಾಗೂ ಸಾಮಾಜಿಕ ಭದ್ರತೆಯ ಅಸಮಾಧಾನ ಹಳೆಯದೇ. 2023ರ ಏಪ್ರಿಲ್‌ನಲ್ಲಿ ಮೈತೈ ಸಮುದಾಯಕ್ಕೂ ಪರಿಶಿಷ್ಟ ಪಂಗಡ () ಕಾಯ್ದೆಯಡಿ ಮೀಸಲಾತಿ ನೀಡುವ ಪ್ರಸ್ತಾವನೆ ಬಂದಾಗ ಈ ಅಸಮಾಧಾನವು ಹಿಂಸಾತ್ಮಕ ಕಿಚ್ಚಾಗಿ ಮಾರ್ಪಟ್ಟಿತು.

ಈ ಸೂಕ್ಷ್ಮ ಸನ್ನಿವೇಶವನ್ನು ನಿಭಾಯಿಸಬೇಕಿದ್ದ ಅಂದಿನ ಮುಖ್ಯಮಂತ್ರಿ ಎನ್. ಬಿರೇನ್ ಸಿಂಗ್ ನೇತೃತ್ವದ ಬಿಜೆಪಿ ಸರ್ಕಾರವು ಪರಿಸ್ಥಿತಿಯನ್ನು ಸುಧಾರಿಸುವ ಬದಲು, ತಮ್ಮದೇ ಮೇಜಾರಿಟೇರಿಯನ್ ರಾಜಕೀಯ ಲಾಭಕ್ಕಾಗಿ ಉರಿಯುವ ಬೆಂಕಿಗೆ ತುಪ್ಪ ಸುರಿಯಿತು. ಕಣಿವೆ ಮೂಲದ ಮೈತೈ ಸಂಘಟನೆಗಳಿಗೆ ಬಹಿರಂಗ ಬೆಂಬಲ ನೀಡುತ್ತಾ, ಬೆಟ್ಟದ ನಿವಾಸಿಗಳನ್ನು ''ಅಕ್ರಮ ನುಸುಳುಕೋರರು'' ಹಾಗೂ ''ನಾರ್ಕೋ-ಭಯೋತ್ಪಾದಕರು'' ಎಂದು ಬಿಂಬಿಸಿ ಧ್ರುವೀಕರಣದ ರಾಜಕಾರಣ ನಡೆಸಲಾಯಿತು.

ಇನ್ನೊಂದೆಡೆ, ಅರಣ್ಯ ಜಾಗಗಳಿಂದ ಬಲವಂತವಾಗಿ ಒಕ್ಕಲೆಬ್ಬಿಸಲ್ಪಟ್ಟ ಕುಕಿಗಳ ಆಕ್ರೋಶವು ಪರಿಸ್ಥಿತಿಯನ್ನು ಮತ್ತಷ್ಟು ಬಿಗಡಾಯಿಸಿತು. ಈ ಸಂಘರ್ಷಗಳು ಬ್ರಿಟಿಷರ ಕಾಲದ ನೀತಿಗಳು ಮತ್ತು ಸ್ವಾತಂತ್ರ್ಯೋತ್ತರ ಆಡಳಿತದ ವೈಫಲ್ಯಗಳಿಂದ ಬೆಳೆದು ಬಂದಿದ್ದರೂ, ಪ್ರಸ್ತುತ ರಾಜಕೀಯ ವಾತಾವರಣದಲ್ಲಿ ಇವು ಮತ್ತಷ್ಟು ವಿಷಪೂರಿತಗೊಂಡವು. ಹಿಂಸಾಚಾರದಲ್ಲಿ 300ಕ್ಕೂ ಹೆಚ್ಚು ಅಮಾಯಕ ಜೀವಗಳು ಬಲಿಯಾಗಿ, 60,000ಕ್ಕೂ ಹೆಚ್ಚು ಜನರು ಸ್ವಂತ ಮನೆಯನ್ನು ಕಳೆದುಕೊಂಡು ಬೀದಿಗೆ ಬಿದ್ದರು. ಊರುಗಳಿಗೆ ಬೆಂಕಿ ಬಿದ್ದಿದೆ, ವ್ಯಾಪಾರಗಳನ್ನು ಲೂಟಿ ಮಾಡಲಾಗಿದೆ, ಪ್ರಾರ್ಥನಾ ಮಂದಿರಗಳನ್ನು ಧ್ವಂಸಗೊಳಿಸಲಾಗಿದೆ. ಅದರಲ್ಲೂ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯಗಳು ಮನುಷ್ಯತ್ವವೇ ತಲೆತಗ್ಗಿಸುವಂತೆ ಮಾಡಿವೆ.

ಹಿಂಸೆಯ ಬೆಂಕಿ ಹರಡುತ್ತಿದ್ದರೂ ಪ್ರಧಾನಿ ಮೋದಿ ಅವರ ಮೌನ ಹಾಗೂ ಗೃಹ ಸಚಿವ ಅಮಿತ್ ಶಾ ಅವರ ನಿಷ್ಕ್ರಿಯತೆ ಆಡಳಿತಾತ್ಮಕ ವೈಫಲ್ಯಕ್ಕೆ ಅತಿದೊಡ್ಡ ನಿದರ್ಶನ. ಇಡೀ ರಾಜ್ಯವೇ ಹೊತ್ತಿ ಉರಿಯುತ್ತಿದ್ದಾಗಲೂ ಪ್ರಧಾನಿ ಮೋದಿ ಒಮ್ಮೆಯೂ ಮಣಿಪುರಕ್ಕೆ ಭೇಟಿ ನೀಡಲಿಲ್ಲ. ಗೃಹ ಸಚಿವ ಅಮಿತ್ ಶಾ ಅವರು 2023ರಲ್ಲಿ ಕೈಗೊಂಡ ಅಲ್ಪಾವಧಿಯ ಭೇಟಿಯೂ ಸಹಜ ಸ್ಥಿತಿಯನ್ನು ತರಲು ನೆರವಾಗಲಿಲ್ಲ. ಅವರು ಇದನ್ನು ಕೇವಲ ''ಜನಾಂಗೀಯ ಘರ್ಷಣೆ'' ಎಂದು ಹಗುರವಾಗಿ ಪರಿಗಣಿಸಿ, ಸಿಎಂ ಬಿರೇನ್ ಸಿಂಗ್‌ರನ್ನು ಬಹುಕಾಲ ಸಮರ್ಥಿಸಿಕೊಂಡು ಬಂದದ್ದು ಪರಿಸ್ಥಿತಿ ಕೈಮೀರಲು ಪ್ರಮುಖ ಕಾರಣವಾಯಿತು. ಶಾಂತಿ ಸ್ಥಾಪನೆಗಿಂತ ರಾಜಕೀಯ ಲೆಕ್ಕಾಚಾರವೇ ಕೇಂದ್ರಕ್ಕೆ ಮುಖ್ಯವಾಯಿತೇ ಎಂಬ ಪ್ರಶ್ನೆ ಮೂಡುತ್ತದೆ.

ಅಂತಿಮವಾಗಿ, 2024ರ ಲೋಕಸಭಾ ಚುನಾವಣೆಯಲ್ಲಿ ಮಣಿಪುರದ ಪ್ರಜೆಗಳು ಬಿಜೆಪಿಯನ್ನು ಸಂಪೂರ್ಣವಾಗಿ ತಿರಸ್ಕರಿಸಿ ಎರಡೂ ಕ್ಷೇತ್ರಗಳಲ್ಲಿ ವಿರೋಧ ಪಕ್ಷವನ್ನು ಗೆಲ್ಲಿಸುವ ಮೂಲಕ ತಮ್ಮ ತೀವ್ರ ಆಕ್ರೋಶವನ್ನು ವ್ಯಕ್ತಪಡಿಸಿದರು. ತರುವಾಯ 2025ರ ಫೆಬ್ರವರಿಯಲ್ಲಿ ಎನ್. ಬಿರೇನ್ ಸಿಂಗ್ ರಾಜೀನಾಮೆ ನೀಡಬೇಕಾಯಿತು ಹಾಗೂ ರಾಜ್ಯವನ್ನು ರಾಷ್ಟ್ರಪತಿ ಆಡಳಿತಕ್ಕೆ ಒಳಪಡಿಸಲಾಯಿತು.

ಆದರೆ, ಈ ರಾಷ್ಟ್ರಪತಿ ಆಳ್ವಿಕೆಯು ನಿಜವಾಗಿಯೂ ಶಾಂತಿ ತರುವ ಪ್ರಾಮಾಣಿಕ ಪ್ರಯತ್ನವೋ ಅಥವಾ ಸರ್ಕಾರದ ತಲೆದಂಡ ತಪ್ಪಿಸಿಕೊಳ್ಳುವ ರಾಜಕೀಯ ತಂತ್ರವೋ ಎಂಬ ಅನುಮಾನ ಪರಿಹಾರವಾಗಲಿಲ್ಲ. ಒಂದು ವರ್ಷದ ರಾಷ್ಟ್ರಪತಿ ಆಡಳಿತದ ನಂತರ, ಫೆಬ್ರವರಿ 2026ರಲ್ಲಿ ವೈ. ಖೇಮ್‌ಚಂದ್ ಸಿಂಗ್ ನೇತೃತ್ವದಲ್ಲಿ ನೂತನ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದರೂ ಹಿಂಸಾಚಾರಕ್ಕೆ ತಡೆಬೀಳಲಿಲ್ಲ. ಏಪ್ರಿಲ್ 2026ರಲ್ಲಿ ವಿಷ್ಣುಪುರದ ಟ್ರೋಂಗ್ಲಾಬಿ ಪ್ರದೇಶದಲ್ಲಿ ನಡೆದ ಬಾಂಬ್ ಸ್ಫೋಟದಲ್ಲಿ ಇಬ್ಬರು ಮುಗ್ಧ ಮಕ್ಕಳು ಬಲಿಯಾದ ಘಟನೆ ಶಾಂತಿಯ ಭರವಸೆಯನ್ನು ಧೂಳೀಪಟ ಮಾಡಿತು.

ಪರಿಸ್ಥಿತಿ ಮತ್ತಷ್ಟು ಸಂಕೀರ್ಣಗೊಂಡು, ಮೈತೈ-ಕುಕಿ ಸಂಘರ್ಷದ ಜೊತೆಗೆ 2026ರಲ್ಲಿ ನಾಗಾ ಮತ್ತು ಕುಕಿ-ರ್ಝೋ ಸಮುದಾಯಗಳ ನಡುವೆಯೂ ಸಶಸ್ತ್ರ ಘರ್ಷಣೆಗಳು ಆರಂಭವಾದವು. ಮೇ ತಿಂಗಳಲ್ಲಿ ಮೂವರು ಕುಕಿ ಪಾದ್ರಿಗಳ ಹತ್ಯೆಯಾದ ಬಳಿಕ ಸೇಡು-ಪ್ರತಿಸೇಡಿನ ಅಪಹರಣಗಳು ಹಾಗೂ ಹತ್ಯೆಗಳು ಸರಣಿಯಾಗಿ ನಡೆದವು. ಇತ್ತೀಚೆಗಷ್ಟೇ ನೊನೆ ಮತ್ತು ಕಂಪ್ಲಿ ಗಡಿ ಭಾಗದಲ್ಲಿ ಕುಕಿ ಸಮುದಾಯದ ಐವರು ಯುವಕರ ಸಶಸ್ತ್ರ ಹತ್ಯೆಯಾಗಿದ್ದು, ಇಡೀ ರಾಜ್ಯದಲ್ಲಿ ಬೃಹತ್ ಪ್ರತಿಭಟನೆಗಳು, ರಸ್ತೆ ತಡೆ ಹಾಗೂ ಆಕ್ರೋಶದ ಕಿಚ್ಚು ಮತ್ತೆ ಉದ್ಭವಿಸಿದೆ.

ಇನ್ನೊಂದೆಡೆ, ಶಸ್ತ್ರಸಜ್ಜಿತ ಗುಂಪುಗಳ ಅಟ್ಟಹಾಸದಿಂದಾಗಿ ಕಾನೂನು-ಸುವ್ಯವಸ್ಥೆ ಸಂಪೂರ್ಣ ಕುಸಿದುಬಿದ್ದಿದೆ. ಸರ್ಕಾರಿ ಶಸ್ತ್ರಾಗಾರಗಳಿಂದ ಲೂಟಿಯಾದ ಬಂದೂಕುಗಳು ದಾಳಿಗೆ ಬಳಕೆಯಾಗುತ್ತಿದ್ದು, ಪೊಲೀಸ್ ಪಡೆಗಳು ಪಕ್ಷಪಾತ ಮಾಡುತ್ತಿವೆ ಎಂಬ ಗಂಭೀರ ಆರೋಪಗಳಿವೆ. ಸೈನ್ಯವನ್ನು ನಿಯೋಜಿಸಲಾಗಿದ್ದರೂ, ಅವರಿಗೆ ಸೂಕ್ತ ರಾಜಕೀಯ ನಿರ್ದೇಶನ ಮತ್ತು ಅಧಿಕಾರವಿಲ್ಲದೆ ಕೈಕಟ್ಟಿ ಕುಳಿತುಕೊಳ್ಳುವಂತಾಗಿದೆ.

ರಾಜಧಾನಿ ಇಂಫಾಲ್‌ನಲ್ಲಿ ಸಶಸ್ತ್ರ ಕುಕಿ ಗುಂಪುಗಳೊಂದಿಗಿನ ಕದನ ವಿರಾಮ ಒಪ್ಪಂದವನ್ನು ತಕ್ಷಣ ರದ್ದುಗೊಳಿಸುವಂತೆ ಒತ್ತಾಯಿಸಿ ಲಕ್ಷಾಂತರ ಪ್ರಜೆಗಳು ಬೀದಿಗಿಳಿದಿದ್ದಾರೆ. ಕುಕಿ ಸಮುದಾಯವು ತಮಗಾಗಿ ಪ್ರತ್ಯೇಕ ಕೇಂದ್ರಾಡಳಿತ ಪ್ರದೇಶಕ್ಕೆ ಒತ್ತಾಯಿಸುತ್ತಿದ್ದರೆ, ಮೈತೈ ಮತ್ತು ನಾಗಾ ಸಮುದಾಯಗಳು ರಾಜ್ಯದ ವಿಭಜನೆಯನ್ನು ವಿರೋಧಿಸುತ್ತಿವೆ.

ಇದರ ಜೊತೆಗೆ, ಮ್ಯಾನ್ಮಾರ್‌ನ ''ಗೋಲ್ಡನ್ ಟ್ರಯಾಂಗಲ್'' ಗಡಿಗೆ ಹತ್ತಿರವಿರುವ ಮಣಿಪುರದಲ್ಲಿ ಬ್ಲ್ಯಾಕ್ ಮಾರ್ಕೆಟ್, ಮಾದಕ ದ್ರವ್ಯ ಸಾಗಣೆ ಮತ್ತು ಅಕ್ರಮ ಶಸ್ತ್ರಾಸ್ತ್ರ ಸರಬರಾಜು ಜಾಲಗಳು ಈ ಅರಾಜಕತೆಯ ವಾತಾವರಣದಿಂದಲೇ ಕೊಬ್ಬುತ್ತಿವೆ. ಈ ಅಕ್ರಮ ಆರ್ಥಿಕತೆಯಿಂದ ಲಾಭ ಪಡೆಯುತ್ತಿರುವ ಸಶಸ್ತ್ರ ಶಕ್ತಿಗಳನ್ನು ಹತ್ತಿಕ್ಕಲು ಕೇಂದ್ರದ ಭದ್ರತಾ ಪಡೆಗಳಿಗೆ ಸ್ಪಷ್ಟ ರಾಜಕೀಯ ನಿರ್ದೇಶನ ಸಿಗದಿರುವುದು ಆಡಳಿತದ ಹಿನ್ನಡೆಗೆ ಸಾಕ್ಷಿ. ಪ್ರಸ್ತುತ ಇಡೀ ರಾಜ್ಯವು 250ಕ್ಕೂ ಹೆಚ್ಚು ಕಂಪನಿಗಳ ಭದ್ರತಾ ಪಡೆಗಳ ಬಫರ್ ಝೋನ್ ಮೂಲಕ ಇಬ್ಭಾಗವಾಗಿದ್ದು, ಕೃಷಿ, ವ್ಯಾಪಾರ ಮತ್ತು ಶಿಕ್ಷಣ ವ್ಯವಸ್ಥೆಗಳು ಸಂಪೂರ್ಣವಾಗಿ ಹಳಿ ತಪ್ಪಿವೆ.

ವಾಸ್ತವದಲ್ಲಿ, ಮಣಿಪುರದ ದುರಂತ ಕೇವಲ ಒಂದು ರಾಜ್ಯದ ಸಮಸ್ಯೆಯಲ್ಲ. ಅಲ್ಪಸಂಖ್ಯಾತರನ್ನು ಮೂಲೆಗುಂಪು ಮಾಡಿ ಅಧಿಕಾರ ಹಿಡಿಯುವ ಅಪಾಯಕಾರಿ ರಾಜಕೀಯ ಧೋರಣೆಗೆ ಇದೊಂದು ಜಾಗತಿಕ ಉದಾಹರಣೆಯಾಗಿದೆ. ದೆಹಲಿಯಲ್ಲಿ ಕುಳಿತಿರುವ ಆಡಳಿತಗಾರರು ಈ ಸಮಸ್ಯೆಯನ್ನು ದೀರ್ಘಕಾಲೀನವಾಗಿ ಬರಿ ನಿರ್ವಹಿಸಬಹುದು ಎಂಬ ಭ್ರಮೆಯಲ್ಲಿದ್ದಾರೆ. ಆದರೆ, ಕೇವಲ ಭದ್ರತಾ ಪಡೆಗಳನ್ನು ನಿಯೋಜಿಸಿ ಮೇಲ್ಮೈಗೆ ಮಾತ್ರ ಮುಲಾಮು ಹಚ್ಚುವ ತಾತ್ಕಾಲಿಕ ಕೆಲಸ ಎಂದಿಗೂ ಶಾಶ್ವತ ಪರಿಹಾರವಾಗುವುದಿಲ್ಲ. ಕೇವಲ ಬಂದೂಕಿನ ಬಲದಿಂದ ಶಾಂತಿ ತರಲು ಸಾಧ್ಯವಿಲ್ಲ, ಅದಕ್ಕೆ ರಾಜಕೀಯ ಪ್ರಾಮಾಣಿಕತೆ ಬೇಕು.

ಶಾಶ್ವತ ಪರಿಹಾರ ಕಂಡುಕೊಳ್ಳಬೇಕಾದರೆ ತಕ್ಷಣವೇ ಕೆಲ ನಿರ್ಣಾಯಕ ಕ್ರಮಗಳು ಜಾರಿಯಾಗಬೇಕು.

ಬೆಟ್ಟ ಮತ್ತು ಕಣಿವೆ ಪ್ರದೇಶಗಳ ನಡುವಿನ ರಸ್ತೆ ನಿರ್ಬಂಧಗಳನ್ನು ಹಾಗೂ ಆರ್ಥಿಕ ದಿಗ್ಬಂಧನಗಳನ್ನು ತಕ್ಷಣ ತೆರವುಗೊಳಿಸಿ ಸಂಚಾರ ಹಾಗೂ ಅಗತ್ಯ ಸಾಮಗ್ರಿಗಳ ಪೂರೈಕೆಗೆ ಅನುವು ಮಾಡಿಕೊಡಬೇಕು.

ಕೇವಲ ಕಾಗದದ ಮೇಲಿನ ಆಡಳಿತ ಬದಲಾವಣೆಯಲ್ಲದೆ, ಪ್ರಧಾನಿ ಮತ್ತು ಗೃಹ ಸಚಿವರ ನೇರ ಮೇಲ್ವಿಚಾರಣೆಯಲ್ಲಿ ಮೈತೈ, ಕುಕಿ ಮತ್ತು ನಾಗಾ ಸಮುದಾಯಗಳ ಪ್ರಮುಖ ಭಾಗೀದಾರರೊಂದಿಗೆ ಮುಕ್ತ ಹಾಗೂ ನಿಷ್ಪಕ್ಷಪಾತ ರಾಜಕೀಯ ಸಂಭಾಷಣೆ ಆರಂಭಿಸಬೇಕು.

ಗಡಿ ಭಾಗದ ಮಾದಕ ದ್ರವ್ಯ ದಂಧೆ, ಅಕ್ರಮ ಶಸ್ತ್ರಾಸ್ತ್ರ ಪೂರೈಕೆ ಮತ್ತು ಗಡಿ ನುಸುಳುವಿಕೆ ಜಾಲವನ್ನು ಕಟ್ಟುನಿಟ್ಟಾಗಿ ಹತ್ತಿಕ್ಕಬೇಕು. ಲೈಂಗಿಕ ದೌರ್ಜನ್ಯಕ್ಕೊಳಗಾದವರಿಗೆ ಹಾಗೂ ಸಂತ್ರಸ್ತರಿಗೆ ನ್ಯಾಯ ಖಚಿತಪಡಿಸಿ, ಆಡಳಿತಾತ್ಮಕ ವೈಫಲ್ಯಕ್ಕೆ ಕಾರಣರಾದವರ ಹೊಣೆಗಾರಿಕೆಯನ್ನು ನಿರ್ಧರಿಸಬೇಕು.

ಒಂದೇ ರೀತಿಯ ವಿಫಲ ತಂತ್ರಗಳನ್ನು ಮರಳಿ ಮರಳಿ ಪ್ರಯೋಗಿಸುತ್ತಾ ವಿಭಿನ್ನ ಫಲಿತಾಂಶವನ್ನು ನಿರೀಕ್ಷಿಸುವುದು ರಾಜಕೀಯ ಮೂರ್ಖತನ. ಭಾರತದ ರತ್ನ ಎಂದು ಕರೆಸಿಕೊಳ್ಳುತ್ತಿದ್ದ ಮಣಿಪುರ ಇಂದು ರಾಜಕೀಯ ನಿರ್ಲಕ್ಷ್ಯ, ಜನಾಂಗೀಯ ಕಲಹ ಮತ್ತು ಸರ್ಕಾರದ ವೈಫಲ್ಯಕ್ಕೆ ಸಿಲುಕಿ ರಕ್ತ ಹರಿಸುತ್ತಿದೆ. ಮಣಿಪುರದ ಸಮಾಜಕ್ಕೆ ಮತ್ತು ಸಾಮಾನ್ಯ ಜನರಿಗೆ ಬೇಕಿರುವುದು ಕೇಂದ್ರದ ಬಾಯಿಮಾತಿನ ಆಶ್ವಾಸನೆಗಳಲ್ಲ, ಬದಲಿಗೆ ಕಳೆದುಹೋದ ಭರವಸೆ, ಭದ್ರತೆ ಮತ್ತು ಶಾಂತಿಯ ಮರುಸ್ಥಾಪನೆ. ದ್ವೇಷದ ರಾಜಕೀಯದ ಆಚೆಗೆ ನಿಂತು ಮಣಿಪುರವನ್ನು ಹೀಗೆಯೇ ನಿರ್ಲಕ್ಷಿಸುತ್ತಾ ಹೋದರೆ, ಅದರ ಭೀಕರ ಪರಿಣಾಮ ಇಡೀ ಈಶಾನ್ಯ ಭಾರತದ ಸ್ಥಿರತೆಯನ್ನೇ ದಹಿಸಿಹಾಕಲಿದೆ.

ಅಂದು ಇಂದಿರಾ, ಇಂದು ಮೋದಿ: ಪುನಃ ಸಾಕ್ಷಿಯಾದ ರಾಮಲೀಲಾ ಮೈದಾನ!

ಅದೇ ದೆಹಲಿ, ಅದೇ ರಾಮಲೀಲಾ ಮೈದಾನ. 51 ವರ್ಷಗಳ ಅಂತರದಲ್ಲಿ ಎರಡು ಬೃಹತ್ ಪ್ರತಿಭಟನೆಗಳು. ಎರಡು ವಿಭಿನ್ನ ರಾಜಕೀಯ ಸನ್ನಿವೇಶಗಳು.

1975ರ ಜೂನ್ 25. ಪ್ರಧಾನಿ ಇಂದಿರಾ ಗಾಂಧಿ ವಿರುದ್ಧ ಜಯಪ್ರಕಾಶ್ ನಾರಾಯಣ್ ನೇತೃತ್ವದಲ್ಲಿ ಜನಸಾಗರ ಸೇರಿತ್ತು.

2026ರ ನವೆಂಬರ್ 1. ನರೇಂದ್ರ ಮೋದಿ ಸರ್ಕಾರ ಮತ್ತು ಚುನಾವಣಾ ಆಯೋಗದ ವಿರುದ್ಧ ಇಂಡಿಯಾ ಒಕ್ಕೂಟದ ನಾಯಕರು ಅದೇ ಮೈದಾನದಲ್ಲಿ ಒಗ್ಗೂಡಿದರು. 1975ರ ಮಹಾಸಭೆಯನ್ನು ನೆನಪಿಸುವಂತಹ ಮತ್ತೊಂದು ಅಮೋಘ ಮಹಾಸಭೆ ಭಾನುವಾರ ನಡೆಯಿತು.

ಅಂದು ಪ್ರಧಾನಿ ರಾಜೀನಾಮೆಗೆ ಒತ್ತಾಯ. ಇಂದು ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹ.

ಅಂದು ಇಂದಿರಾ ಗಾಂಧಿಯವರ ಚುನಾವಣೆಯನ್ನು ಅಲಹಾಬಾದ್ ಹೈಕೋರ್ಟ್ ಅಸಿಂಧುಗೊಳಿಸಿದ ತೀರ್ಪು ಹೋರಾಟಕ್ಕೆ ತಕ್ಷಣದ ಕಾರಣವಾಗಿ ಒದಗಿತ್ತು.

ಇಂದು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (), ವ್ಯಾಪಕ ಮತದಾರರ ಹೆಸರುಗಳ ಅಳಿಸುವಿಕೆ ಹಾಗೂ ಗಂಭೀರ ಚುನಾವಣಾ ಅಕ್ರಮಗಳ ಆರೋಪ ಪ್ರತಿಭಟನೆಗೆ ಕಾರಣ.

ಅಂದು ಜೆಪಿ ಅಹಿಂಸಾತ್ಮಕ ಸತ್ಯಾಗ್ರಹಕ್ಕೆ ಕರೆ ನೀಡಿದ್ದರು. ಇಂದು ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಮಮತಾ ಬ್ಯಾನರ್ಜಿ, ಅಖಿಲೇಶ್ ಯಾದವ್ ಸೇರಿದಂತೆ ಪ್ರತಿ ಪಕ್ಷಗಳ ನಾಯಕರು ಮತ ಉಳಿಸಿ, ದೇಶ ಉಳಿಸಿ ಘೋಷಣೆಯಡಿ ಒಗ್ಗಟ್ಟಾಗಿದ್ದರು.

ಅಂದು ಅಧಿಕಾರದಲ್ಲಿದ್ದುದು ಕಾಂಗ್ರೆಸ್. ಇಂದು ಅಧಿಕಾರದಲ್ಲಿರುವುದು ಬಿಜೆಪಿ. ಅಂದು ವಿರೋಧ ಪಕ್ಷಗಳ ಒಗ್ಗಟ್ಟಿನ ಗುರಿ ಇಂದಿರಾ ಗಾಂಧಿ ಸರ್ಕಾರವಾಗಿತ್ತು.

ಇಂದು ವಿರೋಧ ಪಕ್ಷಗಳ ಒಗ್ಗಟ್ಟಿನ ಗುರಿ ಮೋದಿ ಸರ್ಕಾರದ ನೀತಿಗಳು ಮತ್ತು ಚುನಾವಣಾ ಆಯೋಗದ ಕಾರ್ಯವೈಖರಿ. ಆದರೆ, ಎರಡೂ ಹೋರಾಟಗಳ ನಡುವೆ ಮಹತ್ವದ ವ್ಯತ್ಯಾಸ ಉಂಟು!

1975ರ ಪ್ರತಿಭಟನೆಯ ಬೆನ್ನಲ್ಲೇ ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಲಾಯಿತು. ವಿರೋಧ ಪಕ್ಷಗಳ ನಾಯಕರನ್ನು ಬಂಧಿಸಲಾಯಿತು. ಪತ್ರಿಕಾ ಸ್ವಾತಂತ್ರ್ಯಕ್ಕೆ ನಿರ್ಬಂಧ ಬಿತ್ತು.

2026ರ ಪ್ರತಿಭಟನೆಗೆ ದೆಹಲಿ ಪೊಲೀಸರು ಅಧಿಕೃತ ಅನುಮತಿ ನೀಡಿದ್ದರು. ಆದರೂ, ಬಿಜೆಪಿ ನಾಯಕರು ಈ ಹೋರಾಟವನ್ನು ಅರಾಜಕತೆ ಸೃಷ್ಟಿಸುವ ಪ್ರಯತ್ನವೆಂದು ಟೀಕಿಸಿದ್ದರು. 1975ರಲ್ಲಿ ಹೋರಾಟದ ಕೇಂದ್ರಬಿಂದುವಾಗಿದ್ದು ಪ್ರಧಾನಿಯ ಚುನಾವಣೆಯ ಸಿಂಧುತ್ವ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR